ಸಂಪುಟ : 9 ಸಂಚಿಕೆ 259 ಪುಟ : 4 ಬೆಲೆ: 3.00 ರವಿವಾರ ನವೆಂಬರ್ 24 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 259 Pages : 4 Price : 3.00 Sunday November 24 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಮನೆಗಳ ನಿರ್ಮಾಣ ಕಾರ್ಯಕ್ಕೆ ಸಚಿವ ಎಚ್.ಕೆ. ಪಾಟೀಲರಿಂದ ಭೂಮಿಪೂಜೆ


# ಉತ್ತಮ ಗುಣಮಟ್ಟದ ಮನೆ ನಿರ್ಮಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಈ ಪ್ರದೇಶದಲ್ಲಿನ 36 ಮನೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಗಿದೆ. ಪ್ರತಿ ಮನೆಯು 6–7 ಲಕ್ಷ ರೂ.ಗಳ ವೆಚ್ಚದಲ್ಲಿ ನಿರ್ಮಾಣವಾಗಲಿದೆ. ಇದರೊಂದಿಗೆ ರಸ್ತೆ, ಚರಂಡಿ, ಯುಜಿಡಿ ಸೇರಿದಂತೆ ಇತರೆ ಕಾಮಗಾರಿಗಳನ್ನು ನೆರವೇರಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ಶನಿವಾರ ಗದಗ ನಗರದ ವಾರ್ಡ್ ನಂ.30ರಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಯೋಜನೆಯಡಿ ಮನೆಗಳ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡುತ್ತಿದ್ದರು.

ಸದರಿ ಮನೆಗಳು ಬಡವರಿಗೆ ವಿತರಿಸುವ



ಮನೆಗಳಾಗಿದ್ದು, ಕಾಮಗಾರಿ ಕೈಗೊಳ್ಳುವ ಗುತ್ತಿಗೆದಾರರು ಉತ್ತಮ ಗುಣಮಟ್ಟದ ಮನೆ ನಿರ್ಮಿಸುವ ಮೂಲಕ ಬಡವರ ಸೇವೆ ಮಾಡುವಂತೆ ಸಚಿವರು ಸೂಚಿಸಿದರು.

ಈ ಪ್ರದೇಶದ ಹಲವರ ಬೇಡಿಕೆಯಾಗಿರುವ ರೇಷನ್ ಕಾರ್ಡ್ ಸಮಸ್ಯೆ ಕುರಿತಂತೆ ಮಾತನಾಡಿದ ಸಚಿವರು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾಗಿರುವ ಬಿ.ಬಿ. ಅಸೂಟಿಯವರು ಈ ವೇಳೆ ನಮ್ಮ ಜೊತೆಗಿದ್ದಾರೆ. ನಿಮಗೆ ಎದುರಾಗಿರುವ ರೇಷನ್ ಕಾರ್ಡ್ ಕುರಿತ ಸಮಸ್ಯೆಯನ್ನು ಅವರು ಇನ್ನೊಂದು ತಿಂಗಳ ಒಳಗಾಗಿ ಸರಿಪಡಿಸಲಿದ್ದಾರೆ ಸಚಿವರು ಭರವಸೆ ನೀಡಿದರು.

> ಕಾಮಗಾರಿ ಅನುಷ್ಠಾನಗೊಳಿಸುವ ಇಲಾಖೆ ಅಧಿಕಾರಿಗಳು ಮನೆಗಳ ನಿರ್ಮಾಣ ಸೇರಿದಂತೆ ಕೈಗೊಂಡಿರುವ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಗುಣಮಟ್ಟದಿಂದ ಇರುವಂತೆ ನೋಡಿಕೊಳ್ಳಬೇಕು ಎಂದರಲ್ಲದೆ, ಮನೆ ನಿರ್ಮಾಣ ಕಾಮಗಾರಿಯನ್ನು ಆರು ತಿಂಗಳೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಪ್ರಭು ಬುರಬುರೆ, ನಗರ ಸಭೆ ಸದಸ್ಯೆ ಪದ್ಮಾ ಕಟಗಿ, ಆಂಜನೇಯ ಕಟಗಿ ಸೇರಿದಂತೆ ಹಲವರು ಹಾಜರಿದ್ದರು.

## ಸಿ.ಸಿ ರಸ್ತೆ, ಗಟಾರ ನಿರ್ಮಾಣಕ್ಕೆ ಭೂಮಿಪೂಜೆ




■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಶನಿವಾರ ಗದಗ ನಗರದ ವಾರ್ಡ್ ನಂ.35ರಲ್ಲಿ ಸಿಸಿ ರಸ್ತೆ ಹಾಗೂ ಗಟಾರ ನಿರ್ಮಾಣ ಕಾಮಗಾರಿಯ ಭೂಮಿಪೂಜೆ ನೆರವೇರಿಸಿದರು.

ಜಿಲ್ಲಾ ಪಂಚಾಯಿತಿ, ಜಿಲ್ಲಾಡಳಿತ, ತಾಲೂಕು ಪಂಚಾಯಿತಿ ಆಶ್ರಯದಲ್ಲಿ ಅಲ್ಪಸಂಖ್ಯಾತ ಕಾಲೋನಿ ಅಭಿವೃದ್ಧಿ ಯೋಜನೆಯಡಿ ಸಿ.ಸಿ ರಸ್ತೆ ಕಾಮಗಾರಿಗೆ ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಪ್ರಭು ಬುರಬುರೆ ಸೇರಿದಂತೆ ಹಲವರು ಹಾಜರಿದ್ದರು.

## ಕಾಂಗ್ರೆಸ್ ಪಕ್ಷಕ್ಕೆ ಮತ್ತಷ್ಟು ಶಕ್ತಿ



■ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯದ ಮೂರು ಕ್ಷೇತ್ರ ಸೇರಿದಂತೆ ವಯನಾಡಿನಲ್ಲಿ ಪ್ರಿಯಾಂಕ ಗಾಂಧಿ ಭರ್ಜರಿ ಗೆಲುವನ್ನು ಸಾಧಿಸಿರುವುದು ಕಾಂಗ್ರೆಸ್ ಪಕ್ಷಕ್ಕೆ ಮತ್ತಷ್ಟು ಶಕ್ತಿ ಬಂದಿದೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ಸುದ್ದಿಗಾರರೊಂದಿಗೆ ಮಾತನಾಡುತ್ತ, ರಾಜ್ಯದ ಮೂರು ಉಪ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಪಕ್ಷದ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ನಮ್ಮ ಅಭ್ಯರ್ಥಿಗಳಿಗೆ ಗೆಲುವನ್ನು ತಂದುಕೊಟ್ಟಿದ್ದಾರೆ. ಬಿಜೆಪಿಯವರು ಸರಕಾರದ ಬಗ್ಗೆ ಅಪಪ್ರಚಾರವನ್ನು ಮಾಡುವ ಮೂಲಕ ಗೆಲ್ಲಲು ಮುಂದಾಗಿದ್ದರು. ಆದರೆ ಮೂರು ಕ್ಷೇತ್ರಗಳ ಮತದಾರರು ಬಿಜೆಪಿಗೆ ತಕ್ಕ ಉತ್ತರ ನೀಡಿದ್ದಾರೆ ಎಂದರು.

ಜಾರ್ಖಂಡ್‌ನಲ್ಲಿಯೂ ಕಾಂಗ್ರೆಸ್ ಸರಕಾರ ಬರಲಿದೆ ಎಂದು ಆಶಾಭಾವನೆ ವ್ಯಕ್ತಪಡಿಸಿದ ಅವರು, ವಯನಾಡಿನಲ್ಲಿ ಪಕ್ಷದ ನಾಯಕಿ ಪ್ರಿಯಾಂಕ ಗಾಂಧಿ ಗೆಲ್ಲುವ ಮೂಲಕ ದೇಶದ ಜನರಲ್ಲಿ ಹೊಸ ಭರವಸೆಯನ್ನು ಮೂಡಿಸಿದ್ದಾರೆ. ಮುಖ್ಯವಾಗಿ ರಾಜ್ಯ ಕಾಂಗ್ರೆಸ್ ಸರಕಾರ ನಾಡಿನ ಜನ ಮೆಚ್ಚುವ ರಿತಿಯಲ್ಲಿ ತನ್ನ ಆಡಳಿತವನ್ನು ನಡೆಸಲಿದೆ ಎಂದರು.

ವಿ.ಆರ್. ಗುಡಿಸಾಗರ, ವಿ.ಬಿ. ಸೋಮನಕಟ್ಟಿಮಠ, ಬಸವರಾಜ ನವಲಗುಂದ, ಯೂಸುಪ್ ಇಟಗಿ, ಅಂದಪ್ಪ ಬಿಚ್ಚೂರ, ಸಂಗು ನವಲಗುಂದ, ಅಪ್ಪು ಗಿರಡ್ಡಿ, ಆನಂದ ಚಂಗಳಿ, ಶಿವು ಹುಲ್ಲೂರ, ಮೌನೇಶ ಹಾದಿಮನಿ, ದುರ್ಗಪ್ಪ ಹಿರೇಮನಿ, ಕುಮಾರ ಗೌಡನ್ನವರ, ಮಲಿಕ ಯಲಿಗಾರ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

### ರೋಣದಲ್ಲಿ ಅಂತರರಾಜ್ಯ ಕಳ್ಳನ ಮೇಲೆ ಪೊಲೀಸ್ ಫೈರಿಂಗ್

# ಇರಾನಿ ಗ್ಯಾಂಗ್‌ನ ಕಳ್ಳನಿಗೆ ಬೇಡಿ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಪಟ್ಟಣ ಸಮೀಪದ ಕುರಹಟ್ಟಿ ಕಾಲುವೆ ಬಳಿ ಅಂತರರಾಜ್ಯ ಕಳ್ಳನ ಮೇಲೆ ಪೊಲೀಸರು ಗುಂಡು ಹಾರಿಸಿರುವ ಘಟನೆ ಶನಿವಾರ ಮಧ್ಯಾಹ್ನ ನಡೆದಿದೆ.

ಈ ಹಿಂದೆ ಜೂನ್ 6, 2024ರಂದು ಗಂಗಾವತಿ ಪೊಲೀಸರ ಮೇಲೆ ದಾಳಿ ಮಾಡಿ ಪರಾರಿಯಾಗಿದ್ದ ಇರಾನಿ ಗ್ಯಾಂಗ್‌ನ ಪ್ರಮುಖ ಅಂತರರಾಜ್ಯ ಕಳ್ಳನನ್ನು ಗದಗನ ಬೆಟಗೇರಿ ಪೊಲೀಸರು ಹೊಳೆಆಲೂರ ರೇಲ್ವೆ ನಿಲ್ದಾಣದಿಂದ ಬಂಧಿಸಿ ಕರೆತರುವ ಸಂದರ್ಭದಲ್ಲಿ ಆರೋಪಿ ಬಗರ್‌ಅಲಿ ಅಮ್ಜದ್‌ಅಲಿ ಇರಾನಿ ಕುರಹಟ್ಟಿ ಗ್ರಾಮದ ಬಳಿ ಪೊಲೀಸರನ್ನು ಯಾಮಾರಿಸಿ,





ವಾಹನದಿಂದ ಜಿಗಿದು ಓಡಿ ಹೊಗುತ್ತಿರುವಾಗ ಪೊಲೀಸ್ ಸಿಬ್ಬಂದಿಗಳು ತಡ ಮಾಡದೆ ಬೆನ್ನು ಹತ್ತಿದ್ದಾರೆ. ಈ ಸಂದರ್ಭದಲ್ಲಿ ಆರೋಪಿಯು ಹನುಮಂತಪ್ಪ ಓಲೇಕಾರ, ಅಶೋಕ ಗದಗ ಎಂಬ ಪೊಲೀಸ್ ಸಿಬ್ಬಂದಿಗಳ ಮೇಲೆ ದಾಳಿ ನಡೆಸಿ ಗಾಯಗೊಳಿಸಿದ್ದಾನೆ. ಈ ಸಂದರ್ಭದಲ್ಲಿ ಸಿಪಿಐ ಧೀರಜ್ ಶಿಂಧೆ ಮೊದಲು ಗಾಳಿಯಲ್ಲಿ ಗುಂಡು ಹಾರಿಸಿ ಎಚ್ಚರಿಸಿದರೂ ಆರೋಪಿ ಬಗ್ಗದಿದ್ದಾಗ, ಆರೋಪಿಯ ಎಡ ಕಾಲಿಗೆ ಎರಡು ಸುತ್ತು ಗುಂಡು ಹಾರಿಸಿ ಬಂಧಿಸಿದ್ದಾರೆ. ಗಾಯಾಳು ಆರೋಪಿಗೆ ರೋಣ ಸರಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ ಜಿಲ್ಲಾ ಆಸ್ಪತ್ರೆಗೆ ರವಾನಿಸಿದ್ದಾರೆ.

ಘಟನೆಯ ವಿಷಯ ತಿಳಿಯುತ್ತಿದ್ದಂತೆ ರೋಣ ಸರಕಾರಿ ಆಸ್ಪತ್ರೆಗೆ ಭೇಟಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಗಾಯಗೊಂಡ ಪೊಲೀಸ್ ಸಿಬ್ಬಂದಿಗಳ ಆರೋಗ್ಯವನ್ನು ವಿಚಾರಿಸಿ ಘಟನೆ ಕುರಿತು ಮಾಹಿತಿ ಪಡೆದರು. ಡಿವಾಯ್‌ಎಸ್ಪಿ ಪ್ರಭುಗೌಡ ಕಿರದಳ್ಳಿ, ಡಿವಾಯ್‌ಎಸ್ಪಿ ಮಹಾಂತೇಶ ಸಜ್ಜನ, ಸಿಪಿಐ ಎಸ್.ಎಸ್. ಬೀಳಗಿ, ಪಿಎಸ್‌ಐ ಪ್ರಕಾಶ ಬಣಕಾರ ಸೇರಿದಂತೆ ಸಿಬ್ಬಂದಿಗಳಿದ್ದರು.

> ಬಗರ್‌ಅಲಿ ಅಮ್ಜದ್‌ಅಲಿ ಇರಾನಿ ಉರ್ಫ್ ಬೇಗ್ ಇವನು ಅಂತರರಾಜ್ಯ ಕಳ್ಳನಾಗಿದ್ದು, ರಾಜಸ್ಥಾನ, ಉತ್ತರ ಪ್ರದೇಶ ಸೇರಿದಂತೆ ನಾಲ್ಕಾರು ರಾಜ್ಯಗಳಲ್ಲಿ ಇವನ ಮೇಲೆ ಪ್ರಕರಣಗಳಿವೆ. ಈ ಹಿಂದೆ ಇವನು ಗಂಗಾವತಿ ಪೊಲೀಸರ ಮೇಲೆ ಹಲ್ಲೆ ಮಾಡಿ ಪರಾರಿಯಾಗಿದ್ದ. ಶನಿವಾರ ಹೊಳೆಆಲೂರ ರೇಲ್ವೆ ನಿಲ್ದಾಣದ ಬಳಿ ಇರುವ ಬಗ್ಗೆ ಖಚಿತ ಮಾಹಿತಿ ಪಡೆದ ಬೆಟಗೇರಿ ಪೊಲೀಸರು ಬಂಧಿಸಿ ಕರೆತರುವ ಸಂದರ್ಭದಲ್ಲಿ ಆರೋಪಿಯು ಕರ್ತವ್ಯನಿರತ ಸಿಬ್ಬಂದಿಗಳ ಮೇಲೆ ಹಲ್ಲೆ ಮಾಡಿ ಪರಾರಿಯಾಗಲು ಯತ್ನಿಸಿದಾಗ ಎಡಗಾಲಿಗೆ ಎರಡು ಸುತ್ತು ಗುಂಡು ಹಾರಿಸಿದ್ದು, ಆರೋಪಿಯನ್ನು ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದೆ.
>
> – ಬಿ.ಎಸ್. ನೇಮಗೌಡ.
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಗದಗ.

### ಉಪಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಗೆಲುವು ಹಿನ್ನೆಲೆ- ಸಚಿವ ಎಚ್ ಕೆ ಪಾಟೀಲ ಬಿಜೆಪಿ ವಿರುದ್ಧ ವಾಗ್ದಾಳಿ

## ಬಿಜೆಪಿಗೆ ರಾಜ್ಯದ ಜನ ಮಂಗಳಾರತಿ ಮಾಡಿದ್ದಾರೆ



■ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿಗೆ ರಾಜ್ಯದ ಜನ ಮಂಗಳಾರತಿ ಮಾಡಿದ್ದಾರೆ ಎಂದು ಸಚಿವ ಎಚ್ ಕೆ ಪಾಟೀಲ್ ಹೇಳಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಗೆ ರಾಜ್ಯದ ಜನ ಮಂಗಳಾರತಿ ಮಾಡಿದ್ದಾರೆ. ರಾಜ್ಯದ ಉಪಚುನಾವಣೆ ಬಹಳ ಮಹತ್ವದ್ದಾಗಿತ್ತು. ರಾಜ್ಯದ ಹಲವಾರು ಬೆಳವಣಿಗೆಗಳಿಗೆ ಸಮರ್ಪಕ ಉತ್ತರ ನೀಡಿ ಮಂಗಳಾರತಿ ಮಾಡಿದ್ದಾರೆ ಎಂದಿದ್ದಾರೆ.

ವಕ್ಫ್ ಹೆಸರಲ್ಲಿ ಸಮಾಜ ಒಡೆಯುವ ಕೆಲಸ ಮಾಡಿದ್ದರು. ಸಮಾಜ ಒಡೆಯುವ ದೊಡ್ಡ ಹುನ್ನಾರ ಮಾಡಿದ್ದರು. ಗ್ಯಾರಂಟಿ ನಿಲ್ಲಿಸುತ್ತೇವೆ ಅಂತ ಪ್ರಧಾನಿವರಿಗೂ ಸುಳ್ಳು ಹೇಳಿ ಗೊಂದಲ ಸೃಷ್ಟಿಸಿದ್ದರು. ಮುಖ್ಯಮಂತ್ರಿ ತೇಜೋವಧೆ ಮಾಡಿ ಸರ್ಕಾರ ಉಳಿಯೋದಿಲ್ಲ ಅಂತ ಹೇಳಿದರು. ಆದರೆ ಜಾಗೃತ ಮತದಾರ ಬಿಜೆಪಿಗೆ ಕಪಾಳಮೋಕ್ಷ ಮಾಡಿದ್ದಾನೆ ಎಂದು ವ್ಯಂಗವಾಡಿದ್ದಾರೆ.

ಚುನಾವಣೆ ಸೋಲಿನಿಂದ ಬಿಜೆಪಿ ಸುಳ್ಳು ನಡೆಯಲ್ಲ ಅಂತ ಅರಿತುಕೊಳ್ಳಬೇಕು. ಸಮಾಜ ಒಡೆಯುವ ಕೆಟ್ಟ ಮನಸ್ಥಿತಿಗಳಿಗೆ ತಕ್ಕ ಶಾಸ್ತಿ ಆಗಿದೆ. ವೈಯನಾಡಿನಲ್ಲಿ ದೊಡ್ಡ ಮಟ್ಟದಲ್ಲಿ ಪ್ರಿಯಾಂಕಾ ಗಾಂಧಿ ಆಯ್ಕೆ ಆಗಿದ್ದಾರೆ. ಈ ಚುನಾವಣೆ ಪರಿಣಾಮಗಳು ಬಿಜೆಪಿಯನ್ನ ಅಷ್ಟೇ ಸೋಲಿಸಿಲ್ಲ, ಸುಳ್ಳು ಹೇಳುವ ಪ್ರವೃತ್ತಿಯ ಪ್ರಧಾನಿ ನರೇಂದ್ರ ಮೋದಿ ಹಾಗೂ ಶಾ ಅವರನ್ನ ಸೋಲಿಸಿದೆ ಎಂದು ಹೇಳಿದರು.

ಇನ್ನೂ ಮಹಾರಾಷ್ಟ್ರದಲ್ಲಿ ಕಾಂಗ್ರೆಸ್ ಹೀನಾಯ ಸೋಲು ವಿಚಾರಕ್ಕೆ ಸಂಬಂಧಿಸಿದಂತೆ ಮಹಾರಾಷ್ಟ್ರದಲ್ಲಿ ಆಗಿರೋ ಪರಿಣಾಮ ಎಲ್ಲರಿಗೂ ಆಶ್ಚರ್ಯ ತಂದಿದೆ ಎಂದು ಸಚಿವ ಎಚ್ ಕೆ ಪಾಟೀಲ್ ಹೇಳಿದ್ದಾರೆ. ಚುನಾವಣೆ ಪ್ರಕ್ರಿಯೆಯಲ್ಲಿ ಜೊತೆಗೆ ಎಣಿಕೆ ಕಾರ್ಯದಲ್ಲಿ ಅನುಮಾನ ಬಂದಿದೆ. ಈ ಬಗ್ಗೆ ರಾಜಕೀಯ ನಾಯಕರು ಅಭಿಪ್ರಾಯ ಪಟ್ಟಿದ್ದಾರೆ. ನನಗೆ ಸಂಪೂರ್ಣ ಮಾಹಿತಿ ಇಲ್ಲ ಈ ಬಗ್ಗೆ ಆದ್ದರಿಂದ ಈ ಬಗ್ಗೆ ಕಾಯ್ದು ನೋಡಿ ಅವಲೋಕನ ಮಾಡ್ತೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಮುಖಂಡರಾದ ಬಿ.ಬಿ ಅಸೂಟಿ, ಪ್ರಭು ಬುರಬುರೆ, ಅಶೋಕ ಮಂದಾಲಿ ಸೇರಿದಂತೆ ಅನೇಕರಿದ್ದರು.

### ಹಣದ ಹೊಳೆ ಹರಿಸಿ ಕಾಂಗ್ರೆಸ್ ಗೆಲುವು: ಬಸವರಾಜ ಬೊಮ್ಮಾಯಿ

# ಜನರ ತೀರ್ಪಿಗೆ ತಲೆಬಾಗುವೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಉಪ ಚುನಾವಣೆಯಲ್ಲಿ ಶಿಗ್ಗಾವಿ– ಸವಣೂರು ಕ್ಷೇತ್ರದ ಜನರ ತೀರ್ಪನ್ನು ನಾನು ತಲೆಬಾಗಿ ಒಪ್ಪಿಕೊಳ್ಳುತ್ತೇನೆ, ಕಾಂಗ್ರೆಸ್ ಅಭ್ಯರ್ಥಿ ಯಾಸಿರ್ ಖಾನ್ ಪಠಾಣ್ ಗೆ ಅಭಿನಂದನೆ ಸಲ್ಲಿಸುತ್ತೇನೆ. ಕ್ಷೇತ್ರದಲ್ಲಿ ಅಭಿವೃದ್ಧಿ ಪರ್ವ ಹಾಗೆಯೇ ಮುಂದುವರೆಯಲಿ ಅಂತ ಆಶಿಸುತ್ತೇನೆ ಎಂದು ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.



ಶಿಗ್ಗಾವಿ ಕ್ಷೇತ್ರದ ಉಪ ಚುನಾವಣೆಯ ಫಲಿತಾಂಶ ಬಂದ ನಂತರ ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಚುನಾವಣೆ ಸಂದರ್ಭದಲ್ಲಿ ಅಲ್ಲಿಯ ಜನರ ಸ್ಪಂದನೆ ನೋಡಿದರೆ ನಮಗೆ ಗೆಲ್ಲುವ ಭರವಸೆ ಇತ್ತು. ಆದರೆ ವಿಪರೀತ ಹಣದ ಹೊಳೆ ಹರಿಸಿ ಕಾಂಗ್ರೆಸ್ ನವರು ಗೆಲುವು ಸಾಧಿಸಿದ್ದಾರೆ. ಸರ್ಕಾರ ಅವರದ್ದೇ ಇದೆ, ಆಡಳಿತ ಪಕ್ಷ ಅಂತ ಕಾಂಗ್ರೆಸ್ ಶಾಸಕರನ್ನು ಜನ ಆಯ್ಕೆ ಮಾಡಿದ್ದಾರೆ ಎಂದರು.

ನಾವು ಶಿಗ್ಗಾವಿ, ಸವಣೂರು ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಮಾಡಿದ್ದೇವೆ. ಅಭಿವೃದ್ಧಿ ಪರ್ವ ಹಾಗೆಯೇ ಮುಂದುವರೆಯಲಿ ಅಂತ ಆಶಿಸುತ್ತೇನೆ. ಕ್ಷೇತ್ರದ ಜನರಿಗೆ ಒಳ್ಳೆದಾಗಲಿ ಅಂತ ಬಯಸುತ್ತೇನೆ. ಚುನಾವಣೆಯಲ್ಲಿ 10 ಜನ ಸಚಿವರು, 40ಕ್ಕಿಂತ ಹೆಚ್ಚು ಶಾಸಕರು, ಮಾಜಿ ಶಾಸಕರು ಬಂದು ಇಲ್ಲಿಯೇ ಕುಳಿತು ಪ್ರಚಾರ ಮಾಡಿದರು. ಸರ್ಕಾರ ವರ್ಸಸ್ ಬೊಮ್ಮಾಯಿ ಎಂದೇ ಬಿಂಬಿತವಾಯಿತು. ಅವರು ಸರ್ಕಾರದ ಯಂತ್ರ, ಹಣದಿಂದ ಚುನಾವಣೆ ಗೆದ್ದಿದ್ದಾರೆ ಎಂದು ಆರೋಪಿಸಿದರು.

ಶಿಗ್ಗಾವಿಯಲ್ಲಿ ಎಂಪಿ ಚುನಾವಣೆ ನಂತರ ನಾವು ಚನ್ನಾಗಿ ಕೆಲಸ ಮಾಡಿದ್ದೇವು. ಆದರೆ ಇಡೀ ಸರ್ಕಾರನೇ ಬಂತು. ಸಾಮಾನ್ಯವಾಗಿ ಉಪಚುನಾವಣೆಯಲ್ಲಿ ಸರ್ಕಾರಕ್ಕೆ ಅನುಕೂಲ ಇರುತ್ತದೆ. ನಾವು ಕೂಡ ಒಂದು ಕಾಲದಲ್ಲಿ 17 ಉಪ ಚುನಾವಣೆಯಲ್ಲಿ 13 ಕ್ಷೇತ್ರ ಗೆದ್ದಿದ್ದೇವು. ಈ ಸರ್ಕಾರದ ಕೆಲಸದ ಮೇಲೆ ಮತ ಬಂದಿದೆ ಅಂತೇನಿಲ್ಲ. ನಾವು ಉಪ ಚುನಾವಣೆಯಲ್ಲಿ ಅಷ್ಟು ಸ್ಥಾನ ಗೆದ್ದು ಅದಾದ ಮೇಲೆ ಸರ್ಕಾರ ಕಳೆದುಕೊಂಡಿದ್ದೇವು. ಹೀಗಾಗಿ ಕಾಂಗ್ರೆಸ್ ಸರ್ಕಾರ ಒಂದೂವರೆ ವರ್ಷದ ಆಡಳಿತಕ್ಕೆ ಸರ್ಟಿಫಿಕೇಟ್ ಅಂತ ತಿಳಿದುಕೊಳ್ಳುವ ಅವಶ್ಯಕತೆ ಇಲ್ಲ ಎಂದು ಹೇಳಿದರು.

> ಮಹಾರಾಷ್ಟ್ರ ವಿಧಾನಸಭೆ ಚುನಾವಣೆ ಫಲಿತಾಂಶ ನಿರೀಕ್ಷೆಯಂತೆ ಬಿಜೆಪಿಗೆ ಬಹುಮತ ಬಂದಿದೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ನೇತೃತ್ವ, ಮೂರು ಪಕ್ಷದ ಒಗ್ಗಟ್ಟಿನಿಂದ ಕಳೆದ ಮೂರು ವರ್ಷದ ಸರ್ಕಾರದ ಅಭಿವೃದ್ಧಿ ಮೇಲೆ ಜಯ ಸಿಕ್ಕಿದೆ. ಲೋಕಸಭಾ ಚುನಾವಣೆ ನಂತರ ಜನ ನರೇಂದ್ರ ಮೋದಿಯವರ ಪರ ನಿಂತಿರುವುದು ಗೊತ್ತಾಗುತ್ತದೆ. ವಿರೋಧ ಪಕ್ಷದ ಕಾಂಗ್ರೆಸ್ ಲೋಕಸಭಾ ಚುನಾವಣೆಯಲ್ಲಿ ಸೀಟು ಹೆಚ್ಚಿಸಿ ಬೀಗುತ್ತಿದ್ದರು. ಅವರಿಗೆ ಅವರ ಸ್ಥಾನವನ್ನು ಮಹಾರಾಷ್ಟ್ರ ಜನ ತೋರಿಸಿದ್ದಾರೆ.
>
> –ಬಸವರಾಜ್ ಬೊಮ್ಮಾಯಿ, ಸಂಸದರು

## ಸಂಪಾದಕೀಯ

# ಜಾಗೃತ ಮತದಾರರ ನಿರ್ಣಯ

ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಜಯಭೇರಿ ಬಾರಿಸಿದೆ. ಜಾಗ್ರತ ಮತದಾರರು ರಾಜಕೀಯ ಪಂಡಿತರ ಲೆಕ್ಕಾಚಾರವನ್ನು ಬುಡಮೇಲು ಮಾಡಿದ್ದಾರೆ. ಚುನಾವಣಾ ಸಮೀಕ್ಷೆಗಳಿಗೆ ಬೆಲೆ ಇಲ್ಲದಂತೆ ಮಾಡಿದ್ದಾರೆ.

ಚನ್ನಪಟ್ಟಣ ಮತ್ತು ಶಿಗ್ಗಾವಿ ಕ್ಷೇತ್ರದಲ್ಲಿ ಈ ಬಾರಿ ಕುಟುಂಬ ರಾಜಕಾರಣಕ್ಕೆ ಬ್ರೇಕ್ ಬಿದ್ದಂತಾಗಿದೆ. ತಮ್ಮ ಕುಟುಂಬದ ಕುಡಿಗಳಿಗೆ ರಾಜಕೀಯ ಭವಿಷ್ಯ ಕಲ್ಪಿಸುವ ಎಚ್.ಡಿ. ಕುಮಾರಸ್ವಾಮಿ ಮತ್ತು ಬಸವರಾಜ್ ಬೊಮ್ಮಾಯಿ ಕನಸು ಭಗ್ನವಾಗಿದೆ. ಲೋಕಸಭೆ ಚುನಾವಣೆಗೆ ಸ್ಪರ್ಧಿಸುವ ಸಂದರ್ಭದಲ್ಲಿಯೇ ಇಬ್ಬರು ನಾಯಕರು ತಮ್ಮ ಪುತ್ರರಿಗೆ ಉಪಚುನಾವಣೆಯ ಟಿಕೆಟ್ ಕೊಡುವ ಷರತ್ತಿನೊಂದಿಗೆ ಲೋಕಸಭೆ ಅಖಾಡಕ್ಕೆ ಧುಮಿಕ್ಕಿದ್ದರು.

ಆದರೆ ಲೋಕಸಭೆ ಆಸೆಗೆ ವಿಧಾನಸಭೆ ಮರೆತ ಈ ಇಬ್ಬರು ನಾಯಕರಿಗೆ ಆಯಾ ಕ್ಷೇತ್ರದ ಜಾಗೃತ ಮತದಾರರು ತಕ್ಕ ಪಾಠ ಕಲಿಸಿದ್ದಾರೆ. ಅಧಿಕಾರದ ಆಸೆಗಾಗಿ ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟವರಿಗೆ ಇದೇ ಮೊದಲ ಬಾರಿಗೆ ಜನ ತಕ್ಕ ಉತ್ತರ ಕೊಟ್ಟಂತಾಗಿದೆ.

ಜನ ಒಮ್ಮೆ ಕೊಟ್ಟ ಅಧಿಕಾರವನ್ನು ಬಳಸಿಕೊಂಡು ಉತ್ತಮ ಆಡಳಿತ ನೀಡಬೇಕಾಗಿದ್ದ ಈ ಇಬ್ಬರು ಮಾಜಿ ಮುಖ್ಯಮಂತ್ರಿಗಳು, ಇವತ್ತು ಜನರ ಅವಕೃಪೆಗೆ ಪಾತ್ರರಾಗಿದ್ದಾರೆ. ಈ ಇಬ್ಬರು ಮಾಜಿ ಮುಖ್ಯಮಂತ್ರಿಗಳು ತಮ್ಮ ಪುತ್ರರ ಬದಲಾಗಿ ಸಾಮಾನ್ಯ ಕಾರ್ಯಕರ್ತರಿಗೆ ಟಿಕೆಟ್ ಕೊಟ್ಟಿದ್ದರೆ, ಬಿಜೆಪಿ ಅಭ್ಯರ್ಥಿಗಳು ಇವತ್ತು ಅಭೂತಪೂರ್ವ ಗೆಲುವು ಸಾಧಿಸುತ್ತಿದ್ದರು.

ಕುಟುಂಬ ರಾಜಕಾರಣಕ್ಕೆ ಜೋತು ಬಿದ್ದ ಮುಖಂಡರು ಈಗ ಮುಖಭಂಗ ಅನುಭವಿಸಿದ್ದಾರೆ. ಇದು ಕೇವಲ ಚನ್ನಪಟ್ಟಣ ಮತ್ತು ಶಿಗ್ಗಾವಿ ಕ್ಷೇತ್ರದ ಕಥೆಯಲ್ಲ. ಸಂಡೂರು ಕ್ಷೇತ್ರದಲ್ಲೂ ಕುಟುಂಬ ರಾಜಕಾರಣಕ್ಕೆ ಬ್ರೇಕ್ ಹಾಕಲು ಮತದಾರರು ಮುಂದಾಗಿದ್ದರು ಎನ್ನುವುದು ಬಿಜೆಪಿ ಅಭ್ಯರ್ಥಿ ಪಡೆದ ಮತಗಳಿಂದಲೇ ಸಾಬೀತಾಗುತ್ತದೆ.

ಸ್ಥಳೀಯ ಅಭ್ಯರ್ಥಿಗೆ ಬಿಜೆಪಿ ಮಣೆ ಹಾಕಿದ್ದರೆ ಸಂಡೂರು ಕ್ಷೇತ್ರದಲ್ಲೂ ಕುಟುಂಬ ರಾಜಕಾರಣಕ್ಕೆ, ಅಧಿಕಾರಕ್ಕಾಗಿ ವಿಧಾನಸಭೆಯನ್ನು ತ್ಯಜಿಸಿದ ಇ. ತುಕಾರಾಂ ಅವರಿಗೂ ಜನ ತಕ್ಕ ಪಾಠ ಕಲಿಸುತ್ತಿದ್ದರು.

ಪಕ್ಷ ಯಾವುದೇ ಇರಲಿ, ಜಾಗೃತ ಮತದಾರರ ಮುಂದೆ ಯಾವುದೇ ಆಟ ನಡೆಯುವುದಿಲ್ಲ ಎನ್ನುವುದು ಈ ಉಪಚುನಾವಣೆಯಿಂದ ಸಾಬೀತಾಗಿದೆ. ಇನ್ನಾದರೂ ಅಧಿಕಾರದ ಆಸೆಗಾಗಿ ಸ್ಥಾನಪಲ್ಲಟ ಮಾಡುವ ರಾಜಕಾರಣಕ್ಕೆ ತೆರೆ ಬೀಳಲಿ

ರಾಷ್ಟ್ರೀಯ ಮತದಾರರ ದಿನಾಚರಣೆ: ತಾಲೂಕು ಮಟ್ಟದ ಪ.ಪೂ ಕಾಲೇಜು ವಿದ್ಯಾರ್ಥಿಗಳಿಗೆ ಸ್ಪರ್ಧೆ

# ಅರ್ಹ ನಾಯಕನ ಆಯ್ಕೆಗೆ ಆದ್ಯತೆ ನೀಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಪ್ರತಿಯೊಬ್ಬ ಪ್ರಜೆಯೂ ಮತದಾನದ ಮೂಲಕ ತನ್ನ ನಾಯಕನನ್ನು ಆಯ್ಕೆ ಮಾಡುವ ಹಕ್ಕನ್ನು ಹೊಂದಿರುತ್ತಾರೆ. ನಿರ್ಣಾಯಕನಾದ ಮತದಾರ ಯೋಗ್ಯ, ಸುಶಿಕ್ಷಿತ, ಅರ್ಹ ನಾಯಕನ ಆಯ್ಕೆಗೆ ಆದ್ಯತೆ ನೀಡಬೇಕು ಎಂದು ಬಿಸಿಎನ್ ವಿದ್ಯಾಸಂಸ್ಥೆಯ ನಿರ್ದೇಶಕ ಲೋಹಿತ್ ನೆಲವಿಗಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಬಿಸಿಎನ್ ವಿದ್ಯಾಸಂಸ್ಥೆಯ ಬಿಸಿಎನ್ ಪ.ಪೂ ಕಾಲೇಜಿನ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ (ಪ.ಪೂ), ಮತದಾರರ ಸಾಕ್ಷರತಾ ಕ್ಲಬ್ ಇವರ ಸಹಯೋಗದಲ್ಲಿ 2024-25ನೇ ಸಾಲಿನ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಶನಿವಾರ ತಾಲೂಕು ಮಟ್ಟದ ಪ.ಪೂ ಕಾಲೇಜುಗಳ (ಎನ್‌ವಿಡಿ) ರಸಪ್ರಶ್ನೆ, ಭಿತ್ತಿಚಿತ್ರ ರಚನೆ ಹಾಗೂ ಪ್ರಬಂಧ ಸ್ಪರ್ಧೆಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಯುವ ಜನತೆ ಈ ನಾಡಿನ ಬಹುದೊಡ್ಡ ಆಸ್ತಿಯಾಗಿದ್ದು, ಅದರಲ್ಲೂ ಯುವ ಮತದಾರರು ದೇಶದ ಭವಿಷ್ಯ. ನಾವು ಮುಂದೆ ಬಂದು ಸರಿಯಾದ ನಾಯಕನನ್ನು ಆಯ್ಕೆ ಮಾಡದಿದ್ದರೆ ದೇಶದ ಪ್ರಗತಿ ಮತ್ತು ಅಭಿವೃದ್ಧಿಗೆ ಅಡ್ಡಿಯಾಗುತ್ತದೆ ಮತ್ತು ದೇಶದ ಜನರ ಮೇಲೂ ಪರಿಣಾಮ ಬೀರುತ್ತದೆ. ಚುನಾವಣೆಯಲ್ಲಿ ಎಲ್ಲರೂ ಕಡ್ಡಾಯ ಮತದಾನ ಮಾಡುವದರಿಂದ ಅರ್ಹ ವ್ಯಕ್ತಿ ಆಯ್ಕೆಯಾಗುತ್ತಾರೆ. ಮುಂಬರುವ ಪೀಳಿಗೆಗೆ ತಪ್ಪದೇ ಮತ ಚಲಾಯಿಸಲು ಬಲವಾದ ಜಾಲವನ್ನು ನಿರ್ಮಿಸಲು ನಾವು ಪ್ರೋತ್ಸಾಹಿಸಬೇಕು ಎಂದ ಅವರು, 18 ವರ್ಷ ಮೇಲ್ಪಟ್ಟ ಎಲ್ಲರೂ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಂಡು ಮತದಾನದ ಹಕ್ಕನ್ನು ಪಡೆದುಕೊಳ್ಳಬೇಕೆಂದು ಸಲಹೆ ನೀಡಿದರು.



ಸರಕಾರಿ ಪ.ಪೂ ಕಾಲೇಜು ಪ್ರಾಚಾರ್ಯ ಮಂಜುನಾಥ ಕೊಕ್ಕರಗುಂದಿ ಮಾತನಾಡಿ, ವ್ಮತದಾರರಿಗೆ ಮಾಹಿತಿ ನೀಡುವ ಉದ್ದೇಶದಿಂದ ಅಂತಾರಾಷ್ಟ್ರೀಯ ಮತದಾರರ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಇದರ ಅಂಗವಾಗಿ ರಸಪ್ರಶ್ನೆ, ಭಿತ್ತಿಚಿತ್ರ ರಚನೆ ಹಾಗೂ ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಲಾಗುತ್ತಿದೆ. ತಾಲೂಕು, ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿಯೂ ವಿಜೇತರು ಸ್ಪರ್ಧೆ ಮಾಡುವಂತೆ ಅವಕಾಶಗಳಿದ್ದು, ಅದಕ್ಕಾಗಿ ಉತ್ತಮವಾಗಿ ಸಿದ್ಧರಾಗಿ ಸ್ಪರ್ಧೆಯಲ್ಲಿ ವಿಜೇತರಾಗಿ ತಾಲೂಕಿಗೆ ಕೀರ್ತಿ ತರುವ ಕಾರ್ಯವನ್ನು ಮಾಡುವಂತೆ ಹೇಳಿದರು.

ಸಭೆಯಲ್ಲಿ ಎಸ್‌ಎಂಜೆವಿಜೆ ಕಾಲೇಜು ಪ್ರಾಚಾರ್ಯ ಜಾನಾ ನಾಯಕ್, ಉಪನ್ಯಾಸಕಿ ಸತ್ಯಮ್ಮ ಭಜಂತ್ರಿ, ಪ್ರಾಚಾರ್ಯ ಡಿ.ಎಸ್. ಪ್ಯಾಟಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈರಣ್ಣ ಶಿಂಗಟಾಲೂರ ನಿರೂಪಿಸಿದರು.

ಸರಕಾರಿ ಪ.ಪೂ ಕಾಲೇಜು ಪ್ರಾಚಾರ್ಯ ಮಂಜುನಾಥ ಕೊಕ್ಕರಗುಂದಿ ಮಾತನಾಡಿ, ಪ್ರತಿವರ್ಷ ಜನೇವರಿಯಲ್ಲಿ ಮತದಾರರ ದಿನಾಚರಣೆಯನ್ನು ಮಾಡಲಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಲ್ಲಿ ಮತದಾನದ ಹಕ್ಕುಗಳ ಬಗ್ಗೆ ಸರಿಯಾಗಿ ಮಾಹಿತಿ ನೀಡುವದ ಜೊತೆಗೆ ಮತದಾನ ಮಾಡುವದು ಮತ್ತು ಒಂದೊಂದು ಮತಗಳಿಂದ ಆಗುವ ಬದಲಾವಣೆಯ ಬಗ್ಗೆ ಅವರಲ್ಲಿ ಅರಿವು ಮೂಡಿಸುವಂತೆ ಮಾಡುವದು ಮತ್ತು ಮತದಾನಕ್ಕೆ ಅರ್ಹತೆ ದೊರಕುವಲ್ಲಿ ಮೊದಲು ಮತದಾರ ಪಟ್ಟಿಯಲ್ಲಿ ಹೆಸರು ನೊಂದಾಯಿಸುವಂತೆ ಮಾಡುವದು ಅವಶ್ಯವಾಗಿದೆ ಎಂದರು.

# ಶಿರಹಟ್ಟಿ ಘಟಕಕ್ಕೆ 4 ನೂತನ ಬಸ್

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಟ್ಟಣದ ಜನತೆಯ, ವಿವಿಧ ಸಂಘಟನೆಗಳ ಬಹುದಿನಗಳ ಒತ್ತಾಯದ ಪ್ರಯತ್ನವಾಗಿ ಶುಕ್ರವಾರ ಶಿರಹಟ್ಟಿ ಸಾರಿಗೆ ಘಟಕಕ್ಕೆ ಮಂಜೂರಾದ 4 ಹೊಸ ಬಸ್‌ಗಳ ಸಂಚಾರಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರಯಾಣಿಕರ ಅನುಕೂಲಕ್ಕಾಗಿ ಹೊಸ ಬಸ್‌ಗಳು ಸಹಕಾರಿಯಾಗಲಿದ್ದು, ಶಿರಹಟ್ಟಿಯಿಂದ ರಾಣೆಬೆನ್ನೂರ, ಬೆಳ್ಳಟ್ಟಿ ಮಾರ್ಗವಾಗಿ ಶ್ರೀ ಕ್ಷೇತ್ರ ಸಿಂಗಟಾಲೂರ ಸೇರಿದಂತೆ ರಾತ್ರಿ ಸಮಯದಲ್ಲಿ ಗದಗ ಸಂಚರಿಸುವ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಅಧಿಕಾರಿಗಳಿಗೆ ಸೂಚಿಸಿದರು.



ಶಿರಹಟ್ಟಿ ಪಟ್ಟಣದ ಸ್ಮಶಾನದಿಂದ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಡಿಪೋದವರೆಗೆ ರಸ್ತೆ ಸಂಪೂರ್ಣ ಹಾಳಾಗಿದ್ದು, ದುರಸ್ತಿ ಹಾಗೂ ಬೀದಿ ದೀಪ ಅಳವಡಿಸುವ ಕುರಿತು ಸ್ಥಳೀಯ ಕುಂದುಕೊರತೆ ನಿವಾರಣಾ ಸಮಿತಿ ವತಿಯಿಂದ ಶಾಸಕ ಡಾ. ಚಂದ್ರು ಲಮಾಣಿ ಅವರಿಗೆ ಮನವಿ ಸಲ್ಲಿಸಲಾಯಿತು.

ಸಮಿತಿ ಅಧ್ಯಕ್ಷ ಅಕ್ಬರಸಾಬ ಯಾದಗಿರಿ, ಪ.ಪಂ ಸದಸ್ಯ ಫಕ್ಕೀರೇಶ ರಟ್ಟಿಹಳ್ಳಿ, ಸಂದೀಪ ಕಪ್ಪತ್ತನವರ, ಅಶೋಕ ವರವಿ, ಶ್ರೀನಿವಾಸ ಬಾರಬರ, ರಾಮಣ್ಣ ಕಂಬಳಿ, ಪರಶುರಾಮ ಡೊಂಕಬಳ್ಳಿ, ಬಸವರಾಜ ವಡವಿ, ಮುನ್ನಾ ಢಾಲಾಯತ, ರಫೀಕ ಕೆರಿಮನಿ, ಶ್ರೀನಿವಾಸ ಕಪಟಕರ, ಜಾಕೀರ ಕೋಳಿವಾಡ, ಇಂತಿಯಾಜ ಶಿಗ್ಲಿ, ಸಂಜೀವರೆಡ್ಡಿ ಹಸರೆಡ್ಡಿ ಮುಂತಾದವರು ಉಪಸ್ಥಿತರಿದ್ದರು.

ವಿಶ್ವ ವಿಕಲಚೇತನರ ದಿನಾಚರಣೆ

# ವಿಕಲಚೇತನರಿಗೆ ಕ್ರೀಡಾ, ಸಾಂಸ್ಕೃತಿಕ ಸ್ಪರ್ಧೆ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ವಿಶ್ವ ವಿಕಲಚೇತನರ ದಿನಾಚರಣೆಯನ್ನು ಜಿಲ್ಲಾ ಮಟ್ಟದಲ್ಲಿ ಆಚರಿಸಲಾಗುತ್ತಿದೆ. ವಿಕಲಚೇತನರಿಗಾಗಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನ.26ರಂದು ಬೆಳಿಗ್ಗೆ 9 ಗಂಟೆಗೆ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ.

ದೈಹಿಕ, ಬುದ್ಧಿಮಾಂದ್ಯ, ಶ್ರವಣನ್ಯೂನ್ಯತೆಯುಳ್ಳವರು ಮತ್ತು ಅಂಧರು/ದೃಷ್ಟಿದೋಷವುಳ್ಳ ವಿಕಲಚೇತನರು ಕ್ರೀಡಾ ಅಥವಾ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಬಹುದಾಗಿದೆ. ಭಾಗವಹಿಸಲು ಇಚ್ಛಿಸುವ ವಿಕಲಚೇತನರು ಖುದ್ದಾಗಿ ಅಥವಾ ದೂರವಾಣಿ ಮೂಲಕ ನವೆಂಬರ್ 25ರೊಳಗಾಗಿ ಹೆಸರು ನೊಂದಾಯಿಸಬಹುದಾಗಿದೆ.

ಕ್ರೀಡಾ ಸ್ಪರ್ಧೆಗಳ ವಿವರ: 6ರಿಂದ 12 ವರ್ಷ-ಕಿರಿಯ ವಿಭಾಗ, 13ರಿಂದ 18 ವರ್ಷ ಪುರುಷ & ಮಹಿಳೆ-ಹಿರಿಯ ವಿಭಾಗ, 18 ವರ್ಷ ಮೆಲ್ಪಟ್ಟ ಪುರುಷ & ಮಹಿಳೆ ದೈಹಿಕ ವಿಕಲತೆ ಸ್ವರೂಪ ಹೊಂದಿರುವರಿಗೆ ಜಾವಲಿನ್ ಥ್ರೋ, ಗುಂಡು ಎಸೆತ, ಅಂಧರಿಗೆ ಕೇನ್ ರನ್, ಗುಂಡು ಎಸೆತ, ಶ್ರವಣದೋಷ ಮತ್ತು ವಾಕ್‌ದೋಷದವರಿಗೆ 100 ಮೀಟರ್ ಓಟ, ಗುಂಡು ಎಸೆತ ಬುದ್ಧಿಮಾಂದ್ಯತೆಯುಳ್ಳವರಿಗೆ ಮ್ಯೂಜಿಕಲ್ ಚೇರ್, ಚಂಡು ಎಸೆತ.

ಸಾಂಸ್ಕೃತಿಕ ಸ್ಪರ್ಧೆಗಳ ವಿವರ: 6ರಿಂದ 12 ವರ್ಷ-ಕಿರಿಯ ವಿಭಾಗ, 13ರಿಂದ 18 ವರ್ಷ-ಪುರುಷ & ಮಹಿಳೆ ಹಿರಿಯ ವಿಭಾಗ, 18 ವರ್ಷ ಮೆಲ್ಪಟ್ಟ ಪುರುಷ & ಮಹಿಳೆ ದೈಹಿಕ ವಿಕಲತೆ ಸ್ವರೂಪ ಹೊಂದಿರುವರಿಗೆ ಜಾನಪದ ಗೀತೆ, ಭಾವಗೀತೆ, ಅಂಧರಿಗೆ ಜಾನಪದ ಗೀತೆ, ಭಾವಗೀತೆ, ಶ್ರವಣದೋಷ ಮತ್ತು ವಾಕ್‌ದೋಷದವರಿಗೆ ಚಿತ್ರಕಲೆ, ನೃತ್ಯ, ಬುದ್ಧಿಮಾಂದ್ಯದವರಿಗೆ ಫ್ಯಾನ್ಸಿ ಡ್ರೆಸ್ (ವೇಷಭೂಷಣ) ಸ್ಪರ್ಧೆಗಳು ನಡೆಯಲಿವೆ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ತಾ.ಪಂ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಮ್.ಆರ್.ಡಬ್ಲ್ಯು, ತಾ.ಪಂ ಗದಗ-8867556465, ಎಮ್.ಆರ್.ಡಬ್ಲ್ಯು ರೋಣ-9741615926, ಎಮ್.ಆರ್.ಡಬ್ಲ್ಯು ಮುಂಡರಗಿ-9611922445, ಎಮ್.ಆರ್.ಡಬ್ಲ್ಯು ಶಿರಹಟ್ಟಿ 8951128679 ಎಮ್.ಆರ್.ಡಬ್ಲ್ಯು ನರಗುಂದ-9591679022 ಹಾಗೂ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ (ಡಿಡಿಆರ್‌ಸಿ) 08372-220559 ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ನೆಲಮಹಡಿ, ಕೊಠಡಿ ಸಂಖ್ಯೆ: 029 ಇಲ್ಲಿ ದಾಖಲಾತಿಗಳೊಂದಿಗೆ ತಮ್ಮ ಹೆಸರು ನೊಂದಾಯಿಸಿಕೊಳ್ಳಲು ಸೂಚಿಸಲಾಗಿದೆ.

# ಅನೈತಿಕ ಚಟುವಟಿಕೆಗಳನ್ನು ನಿಯಂತ್ರಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಇರುವ ಏಕೈಕ ದೊಡ್ಡ ಆಟದ ಮೈದಾನವು ಅನೈತಿಕ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿದ್ದು, ಅಲ್ಲಿ ನಡೆಯುವ ಅನೈತಿಕ ಚಟುವಟಿಕೆಗಳನ್ನು ಕೂಡಲೇ ನಿಯಂತ್ರಿಸಲು ಕ್ರಮ ಕೈಗೊಳ್ಳುವದರ ಜೊತೆ ತಾಲೂಕಾ ಕ್ರೀಡಾಂಗಣವನ್ನು ಮಾಡಲು ಆದ್ಯತೆ ನೀಡಬೇಕು ಎಂದು ಆಗ್ರಹಿಸಿ ಪಟ್ಟಣದ ಕ್ರೀಡಾಪ್ರೇಮಿಗಳು ಹಾಗೂ ಸಾರ್ವಜನಿಕರು ಶುಕ್ರವಾರ ತಹಸೀಲ್ದಾರ ವಾಸುದೇವ ಸ್ವಾಮಿ ಅವರಿಗೆ ಮನವಿ ಅರ್ಪಿಸಿದರು.



ಈ ಸಂದರ್ಭದಲ್ಲಿ ಯುವ ಮುಖಂಡ ಮೋಹನ ನಂದೆಣ್ಣವರ ಮಾತನಾಡಿ, ಮರಸಭೆಯ ಉಮಾ ವಿದ್ಯಾಲಯ ಮೈದಾನವು ಅನೈತಿಕ ಚಟುವಟಿಕೆಗಳ ತಾಣವಾಗಿದೆ. ಮೈದಾನದಲ್ಲಿ ಕುಳಿತು ಮದ್ಯಪಾನ ಮಾಡುವುದಲ್ಲದೆ, ಕುಡಿದ ಬಾಟಲಿಗಳನ್ನು ಮೈದಾನದಲ್ಲಿಯೇ ಒಡೆದು ಹೋಗುತ್ತಿದ್ದಾರೆ. ಇದರಿಂದ ಬೆಳಗ್ಗೆ ಮೈದಾನಕ್ಕೆ ವಾಯುವಿಹಾರಕ್ಕೆಂದು ಬರುವ ಸಾರ್ವಜನಿಕರು ಹಾಗೂ ಕ್ರೀಡಾಪಟುಗಳಿಗೆ ಒಡೆದ ಗಾಜುಗಳು ಕಾಲಿಗೆ ಚುಚ್ಚಿದ ಸಾಕಷ್ಟು ಉದಾಹರಣೆಗಳಿವೆ. ಮೈದಾನದ ಪಕ್ಕದಲ್ಲಿ ವಾಸವಾಗಿರುವ ನಿವಾಸಿಗಳು ಮಲ-ಮೂತ್ರ ವಿಸರ್ಜನೆಯನ್ನು ಮೈದಾನದ ಒಳ ಬದಿಯಲ್ಲಿ ಮಾಡುತ್ತಿರುವುದರಿಂದ ಮೈದಾನಕ್ಕೆ ಬರುವ ಸಾರ್ವಜನಿಕರಿಗೆ ಹಾಗೂ ಕ್ರೀಡಾಪಟುಗಳಿಗೆ ಮುಜುಗುರವಾಗುತ್ತಿದ್ದು, ಸಂಬಂಧಪಟ್ಟ ಇಲಾಖೆ ಕೂಡಲೇ ಈ ಅನೈತಿಕ ಚಟುವಟಿಕೆಯನ್ನು ನಿಲ್ಲಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ತಹಸೀಲ್ದಾರರು ಈ ಕುರಿತಂತೆ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಶೀಘ್ರ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸದಾನಂದ ನಂದೆಣ್ಣವರ, ಮಹಾಂತೇಶ ಗುಡಿಸಲಮನಿ, ರಬ್ಬಾನಿ ಶಿರಹಟ್ಟಿ, ಮುಜಮಿಲ್ ಮಕಾನದಾರ, ಮಲ್ಲಿಕಾರ್ಜುನ ಸಾಲ್ಮನಿ, ಸಂತೋಷ ಹಾದಿಮನಿ, ಸಂತೋಷ ನಂದೆಣ್ಣವರ, ನಿಂಗಪ್ಪ ಬಾಲಣ್ಣವರ, ಹನುಮಂತಪ್ಪ ನಡವಲಕೇರಿ, ವಿಷ್ಣು ಕೆ, ಆದಿತ್ಯ ಗಡದವರ, ಚೇತನ ಗೋಡಕೆ, ಆನಂದ ನರೇಗಲ್, ಬಸವರಾಜ ಗಡದವರ ಮುಂತಾದವರಿದ್ದರು.

# ಸದ್ಧರ್ಮ ಧಾಮದ ಉದ್ಘಾಟನೆ ಇಂದು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಹಿರೇಮಠ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿರುವ ಹಾನಗಲ್ಲ ಗುರು ಕುಮಾರೇಶ್ವರ ಪುರಾಣ ಮಂಗಲ ಹಾಗೂ ಸದ್ಧರ್ಮಧಾಮದ ಉದ್ಘಾಟನೆ, ಶಾಸಕ ಜಿ.ಎಸ್. ಪಾಟೀಲ ದಂಪತಿಗಳ ವಿವಾಹ ಸುವರ್ಣ ಸಂಭ್ರಮ ಸಮಾರಂಭವು ನ.24ರಂದು ಸಂಜೆ 6 ಗಂಟೆಗೆ ಜರುಗಲಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ. ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರು ಪ್ರಸನ್ನರೇಣುಕ ಡಾ. ವೀರಸೋಮೇಶ್ವರ ಶಿವಾಚಾರ್ಯರು ಸಾನ್ನಿಧ್ಯ ವಹಿಸಿ, ಸದ್ಧರ್ಮ ಧಾಮವನ್ನು ಉದ್ಘಾಟಿಸುವರು. ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ನೇತೃತ್ವ ವಹಿಸುವರು. ಅಬ್ಬಿಗೇರಿ ಹಿರೇಮಠದ ವೀರಭದ್ರ ಶಿವಾಚಾರ್ಯ ಸ್ವಾಮೀಜಿ, ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯ ಸ್ವಾಮೀಜಿ ಸಮ್ಮುಖ ವಹಿಸುವರು. ಪ್ರವಚನ ಮಂಗಲ ನುಡಿಯನ್ನು ಇಲಕಲ್ಲನ ಅನ್ನದಾನ ಶಾಸ್ತ್ರಿಗಳು ಪ್ರಸ್ತುತ ಪಡಿಸಲಿದ್ದಾರೆ.

ಶಾಸಕ ಜಿ.ಎಸ್. ಪಾಟೀಲ ದಂಪತಿಗಳಿಗೆ ಗೌರವ ಸಮರ್ಪಣೆ ಜರುಗಲಿದೆ. ಡಾ. ಕೆ.ಬಿ. ಧನ್ನೂರ, ಎಂ.ಎಸ್. ಧಡೇಸೂರಮಠ, ಬಸವರಾಜ ಕಳಕೊಣ್ಣವರ, ಶಿವನಗೌಡ ಪಾಟೀಲ, ನಿಂಗನಗೌಡ ಲಕ್ಕನಗೌಡ್ರ ಸೇರಿದಂತೆ ಇತರರು ಆಗಮಿಸಲಿದ್ದಾರೆ ಎಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಇಂದು ಜರುಗುವ ಬಸವ ಯೋಗ ಕೇಂದ್ರದ 25ನೇ ವಾರ್ಷಿಕೋತ್ಸವದ ನಿಮಿತ್ತ ಲೇಖನ

# ಬಸವ ಯೋಗ ಕೇಂದ್ರಕ್ಕೆ 'ಬೆಳ್ಳಿ ಹಬ್ಬ'ದ ಸಂಭ್ರಮ

ಮಾನವ ಕುಲದ ಒಳಿತಿಗಾಗಿ ನಮ್ಮ ಪೂರ್ವಜರು, ಋಷಿ-ಮುನಿಗಳು, ಸಾಧು-ಸಂತರು, ಮಹಾತ್ಮರು, ಮೇಧಾವಿಗಳು ಹಲವಾರು ಕೊಡುಗೆಗಳನ್ನು ನೀಡಿದ್ದಾರೆ. ಅವುಗಳಲ್ಲಿ ಯೋಗವು ಮಹತ್ವಪೂರ್ಣ, ಅದ್ವಿತೀಯ, ಅಪ್ರತಿಮ ಕೊಡುಗೆಯಾಗಿದೆ. ನಮ್ಮ ಭಾರತೀಯ ಸಂಸ್ಕೃತಿ-ಪರಂಪರೆ, ದರ್ಶನಗಳಲ್ಲಿ ಯೋಗವು ಅಗ್ರಮಾನ್ಯವಾಗಿದೆ. ಎಲ್ಲಕ್ಕೂ ಮಿಗಿಲಾಗಿ ಯೋಗವು ಪ್ರಾಯೋಗಿಕ ವೈದ್ಯಶಾಸ್ತ್ರವಾಗಿದ್ದು, ಜನತೆಯ ಯೋಗಕ್ಷೇಮ ಸಂರಕ್ಷಿಸುವ ಆರೋಗ್ಯದ ಖಜಾನೆಯಾಗಿದೆ.

ಯೋಗದ ಮಹತ್ವವನ್ನು ಜನತೆಗೆ ತಲುಪಿಸಬೇಕೆಂಬ ಸಂಕಲ್ಪದಿಂದ ತ್ರಿವಿಧ ದಾಸೋಹಿ ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು, ಎಡೆಯೂರು ಶ್ರೀ ಜಗದ್ಗರು ತೋಂಟದಾರ್ಯ ಸಂಸ್ಥಾನ ಮಠಕ್ಕೆ ಪೀಠಾಧಿಪಾತಿಗಳಾದ ಮೇಲೆ ಮೊದಲಿಗೆ ಶ್ರೀ ಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗಪಾಠಶಾಲೆ ಸ್ಥಾಪಿಸಿದರು. ಸ್ಥಾಪನೆಯಾದಂದಿನಿಂದ ಈ ತನಕ ಯೋಗ ಪಾಠಶಾಲೆಯು ಯೋಗದ ಪ್ರಸಾರ ಪ್ರಚಾರ ಸೇವೆ ಸಲ್ಲಿಸುತ್ತಿದೆ.

ಇಂದು ನಮ್ಮ ನಾಡಿಗೆ ಬೇಕಾಗಿರುವುದು ಅಖಂಡ ಆತ್ಮವಿಶ್ವಾಸ ಹೊಂದಿರುವ ಯುವ ಜನಾಂಗ. ಆದರೆ ನಾಡಿನ ಬೆನ್ನೆಲುಬಾದ ಯುವ ಜನತೆ ಇಂದು ತನ್ನ ತೇಜವನ್ನೆಲ್ಲ ಹೆಚ್ಚಿನಾಂಶ ನಿರುಪಯುಕ್ತ ಕಾರ್ಯಗಳಲ್ಲಿ ಹ್ರಾಸಗೊಳಿಸುತ್ತಿರುವುದನ್ನು ನಿಯಂತ್ರಿಸಲು ಯೋಗವು ಒಂದು ಮಹಾನ್ ಅಸ್ತ್ರವಾಗಿದೆ ಎಂದು ನಂಬಿದ ಪೂಜ್ಯಶ್ರೀಗಳು ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಅಂಗ ಸಂಸ್ಥೆಯನ್ನಾಗಿ ಬಸವ ಯೋಗ ಕೇಂದ್ರ ಸ್ಥಾಪಿಸಿದರು.

ಎಲ್ಲ ವಿದ್ಯೆಗಳಲ್ಲಿ ಯೋಗ ವಿದ್ಯೆ ಶ್ರೇಷ್ಠವಾಗಿದೆ. ಈ ವಿದ್ಯೆಯನ್ನು ಸರ್ವ ಜನಾಂಗಕ್ಕೆ ದೊರಕಿಸುವ ನಿಟ್ಟಿನಲ್ಲಿ ಬಸವ ಯೋಗ ಕೇಂದ್ರವು ಕರ್ನಾಟಕ ಸರಕಾರ ಮತ್ತು ಕರ್ನಾಟಕ ವಿಶ್ವವಿದ್ಯಾಲಯ ಮಾನ್ಯತೆಯಲ್ಲಿ 2000-2001ನೇ ಶೈಕ್ಷಣಿಕ ವರ್ಷದಿಂದ ಒಂದು ವರ್ಷ ಅವಧಿಯ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗ ಸ್ಟಡೀಸ್ ನಡೆಸುತ್ತಲಿದೆ.

ಯೋಗ ಶೈಕ್ಷಣಿಕ ಕ್ಷೇತ್ರವನ್ನು ಇನ್ನೂ ಹೆಚ್ಚು ಬಲಪಡಿಸುವ ಉದ್ದೇಶದಿಂದ ಬಸವ ಯೋಗ ಕೇಂದ್ರವು 2019-2020ನೇ ಶೈಕ್ಷಣಿಕ ವರ್ಷದಿಂದ ಒಂದು ವರ್ಷ ಅವಧಿಯ ಪಿ.ಜಿ ಡಿಪ್ಲೋಮಾ ಇನ್ ಯೋಗ ಸ್ಟಡೀಸ್ ಎಂಬ ಸ್ನಾತಕೋತ್ತರ ಪದವಿ ಕೋರ್ಸ್‌ನ್ನು ಪ್ರಾರಂಭಿಸಿ ಯುವಕರಲ್ಲಿ ಯೋಗ ಶಿಕ್ಷಣದ ಕಲಿಕಾ ಆಸಕ್ತಿಯನ್ನು ಇಮ್ಮಡಿಗೊಳಿಸಿರುವುದು ಹೆಮ್ಮೆಯ ವಿಷಯವಾಗಿದೆ. ಇಂದು ಯೋಗ ಸರ್ಟಿಫಿಕೆಟ್ ಮತ್ತು ಡಿಪ್ಲೋಮಾ ಕೋರ್ಸ್ ಪಡೆದ ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳಲ್ಲಿ, ಆಯುಷ್ ಇಲಾಖೆಗಳಲ್ಲಿ ಹೀಗೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಕೇಂದ್ರವು ಕೇವಲ ಯೋಗ ಶಿಕ್ಷಣ ಪ್ರಸಾರ ಸೇವೆಗೆ ಸೀಮಿತವಾಗಿರದೆ ಹತ್ತು ಹಲವು ಸಮಾಜಮುಖಿ ಕಾರ್ಯಗಳಲ್ಲಿಯೂ ತೊಡಗಿದೆ. ಶಾಲಾ-ಕಾಲೇಜ ವಿದ್ಯಾರ್ಥಿಗಳಲ್ಲಿ ಯೋಗಾಸಕ್ತಿ ಹೆಚ್ಚಿಸಲು ಯೋಗಾಸನ ಸ್ಪರ್ಧೆ, ಯೋಗ ಶಿಬಿರ, ಕಾರ್ಯಾಗಾರ, ವಿಚಾರ ಸಂಕಿರಣ, ಯೋಗ ರಸಪ್ರಶ್ನೆ ಎಂದು ಮುಂತಾಗಿ ಸಂಘಟನೆ, ಸಂಶೋಧನೆ, ಸ್ಪರ್ಧಾತ್ಮಕ ಕಾರ್ಯಕ್ರಮಗಳನ್ನು ನಡೆಸುತ್ತಿದೆ.

2021-22 ಮತ್ತು 2022-23ನೇ ಸಾಲಿನ ಪಿ.ಜಿ.ಡಿಪ್ಲೋಮಾ ಇನ್ ಯೋಗ ಸ್ಟಡೀಸ್ ಕೋರ್ಸ್ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ಗೀತಾ ಸಾವುಕಾರ, ಸುಧಾ ಪಾಟೀಲ ಇವರು ಕರ್ನಾಟಕ ವಿಶ್ವವಿದ್ಯಾಲಯದಿಂದ ಚಿನ್ನದ ಪದಕ ಪಡೆದು ಸಾಕ್ಷಿ ಸ್ವರೂಪರಾಗಿರುವರು. ಯೋಗಾಸನ ಕ್ರೀಡಾ ಕ್ಷೇತ್ರದಲ್ಲಿ ವಿದ್ಯಾರ್ಥಿಗಳಲ್ಲದೆ ಸಿಬ್ಬಂದಿಯವರು ಕೂಡಾ ಪ್ರತಿಭಾವಂತರಿದ್ದು, ಪ್ರಾಚಾರ್ಯ ಕೆ.ಎಸ್. ಪಲ್ಲೇದ, ಅಧ್ಯಾಪಕರಾದ ಚೇತನ ಚುಂಚಾ, ಬೀಸಪ್ಪ ಬಿ., ಭಾರತಿ ಪಾಟೀಲ ಸ್ವತಃ ಯೋಗಾಸನ ಕ್ರೀಡಾಪಟುಗಳು, ರಾಷ್ಟ್ರೀಯ ಯೋಗಾಸನ ಕ್ರೀಡಾ ನಿರ್ಣಾಯಕರೂ ಆಗಿದ್ದಾರೆ.

ಪ್ರಸ್ತುತ ದಿನಮಾನದಲ್ಲಿ ಆರ್ಥಿಕವಾಗಿ ಶ್ರೀಮಂತರಿದ್ದರೂ ದೈಹಿಕವಾಗಿ, ಮಾನಸಿಕವಾಗಿ ಆರೋಗ್ಯವಂತರಿಲ್ಲದೆ, ನೆಮ್ಮದಿ ಮತ್ತು ಒತ್ತಡ ಮುಕ್ತ ಜೀವನ ನಡೆಸುತ್ತಿದ್ದಾರೆ. ಎಲ್ಲರೂ ಆರೋಗ್ಯಯುತ, ಶಾಂತಿಯುತ, ಒತ್ತಡ ಮುಕ್ತ, ನೆಮ್ಮದಿ ಸುಖಕರ ಜೀವನ ಅನ್ವೇಷಣೆಯಲ್ಲಿದ್ದಾರೆ. ಇವರೆಲ್ಲರ ಅನ್ವೇಷಣೆಗೆ ಉತ್ತಮ ಪ್ರತಿಫಲ ನೀಡಲು ಬಸವ ಯೋಗ ಕೇಂದ್ರವು ಸದಾ ಶ್ರಮಿಸುತ್ತಲಿದೆ.

ಯೋಗಾಯೋಗ ಎನ್ನುವಂತೆ ಪರಮ ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಎಡೆಯೂರು ಶ್ರೀ ಜಗ್ಗುರು ತೋಂಟದಾರ್ಯ ಸಂಸ್ಥಾನಮಠ, ಡಂಬಳ-ಗದಗ ಇವರು ಯೋಗ ಪಾಠಶಾಲೆಗೆ ನೀಡಿದ 2 ಎಕರೆ ಸ್ಥಳದಲ್ಲಿ ಸುಸಜ್ಜಿತ ಭವ್ಯ ಯೋಗ ಮಹಾವಿದ್ಯಾಲಯದ ಕಟ್ಟಡ ನಿರ್ಮಾಣ ಯೋಜನೆ ಕೈಗೊಂಡು ಇತ್ತೀಚಿಗೆ ಪೂಜ್ಯರ ಸಾನ್ನಿಧ್ಯದಲ್ಲಿ ಡಿ.ಆರ್. ಪಾಟೀಲ, ಎಸ್.ವಿ. ಸಂಕನೂರ ಮುಂತಾದ ಗಣ್ಯರ ನೇತೃತ್ವದಲ್ಲಿ ಯೋಗ ಮಹಾವಿದ್ಯಾಲಯದ ನಿಯೋಜಿತ ಕಟ್ಟಡದ ಭೂಮಿ ಪೂಜೆ ಕಾರ್ಯ ನೆರವೇರಿದೆ.

ವಿಶೇಷವಾಗಿ ಬಸವ ಯೋಗ ಕೇಂದ್ರಕ್ಕೆ 'ಬಸವ ಯೋಗ ಮಹಾವಿದ್ಯಾಲಯ' ಎಂದು ಮರುನಾಮಕರಣೋತ್ಸವ, ಕರ್ನಾಟಕ ಸಂಭ್ರಮ-50, ಸಾಧಕರಿಗೆ ಸನ್ಮಾನ, ಯೋಗ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ರಾಷ್ಟ್ರ ಪ್ರಗತಿಗೆ ಪೂರಕವಾಗಿರುವ ಅಭೂತಪೂರ್ವ ಈ ಕಾರ್ಯಕ್ರಮಕ್ಕೆ ಯೋಗಾಭಿಮಾನಿ, ಯೋಗಾಸಕ್ತರೆಲ್ಲರೂ ಆಗಮಿಸಿ ಶೋಭೆ ತನ್ನಿ.

'ಯೋಗವೇ ಜೀವನ-ಯೋಗ ಕಲಿಯಿರಿ-ಯೋಗ ಕಲಿಸಿರಿ'

**- ಭಾರತಿ ಪಾಟೀಲ.**

ಯೋಗ ಶಿಕ್ಷಕಿ, ಬಸವ ಯೋಗ ಕೇಂದ್ರ, ಗದಗ.

ಬಸವ ಯೋಗ ಕೇಂದ್ರವು ಇಂದು ತನ್ನ ಸಾಧನೆಯ ಸಂತೃಪ್ತಿಯನ್ನು ನಾಡಿಗೆ ಹಂಚಿಕೊಳ್ಳುವ ದಿಸೆಯಲ್ಲಿ 'ಬೆಳ್ಳಿಹಬ್ಬ' ಆಚರಣೆಯ ಸಂಭ್ರಮದಲ್ಲಿರುವದು ಸಂತೋಷಕರ ವಿಷಯವಾಗಿದೆ. ತ್ರಿವಿಧ ದಾಸೋಹಿ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ದಿವ್ಯ ಪ್ರಕಾಶದಲ್ಲಿ ಹಾಗೂ ಪೂಜ್ಯಶ್ರೀ ಜಗದ್ಗುರು ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ಕೃಪಾಶೀರ್ವಾದದ ಮೇರೆಗೆ ನಡೆಯುವ ಬಸವ ಯೋಗ ಕೇಂದ್ರದ ರಜತ ಮಹೋತ್ಸವಕ್ಕೆ ಮುಖ್ಯ ಅತಿಥಿಗಳಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಜ. ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ ಆಗಮಿಸುವರು. ಅಧ್ಯಕ್ಷತೆಯನ್ನು ಬಸವ ಯೋಗ ಚಿಂತನಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ ವಹಿಸುವರು. ರೋಣದ ರಾಜೀವಗಾಂಧಿ ಆಯುರ್ವೇದಿಕ್ ಮೆಡಿಕಲ್ ಕಾಲೇಜ ಪ್ರಾಚಾರ್ಯ ಡಾ. ಆಯ್.ಬಿ. ಕೊಟ್ಟೂರಶೆಟ್ಟಿ, ಪ್ರಾಚಾರ್ಯ ಕೆ.ಎಸ್. ಪಲ್ಲೇದ ಉಪಸ್ಥಿತರಿರುವರು.

# ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು: ವಿಜಯೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಚನ್ನಪಟ್ಟಣ, ಶಿಗ್ಗಾಂವ, ಸಂಡೂರ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ನಗರದಲ್ಲಿ ವಿಜಯೋತ್ಸವ ಆಚರಿಸಲಾಯಿತು. ಗದಗ ಜಿಲ್ಲಾ ಕೆ.ಪಿ.ಸಿ.ಸಿ. ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಉಮರ ಫಾರೂಕ ಹುಬ್ಬಳ್ಳಿ ವಿಜಯೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿ, ರಾಜ್ಯದ ಜನತೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತಮ್ಮ ಒಲವನ್ನು ತೋರಿಸಿ, ವಿರೋಧ ಪಕ್ಷಗಳಿಗೆ ತಕ್ಕ ಪಾಠ ಕಲಿಸಿದ್ದಾರೆ ಎಂದು ಹೇಳಿದರು.

ವಿಜಯೋತ್ಸವದಲ್ಲಿ ಗದಗ ಶಹರ ಘಟಕದ ಉಪಾಧ್ಯಕ್ಷರು, ಗದಗ-ಬೆಟಗೇರಿ ನಗರಸಭೆ ನಾಮನಿರ್ದೇಶಿತ ಸದಸ್ಯ ಮಹಮ್ಮದ ಎನ್.ಶಾಲಗಾರ, ಎಂ.ಬಿ. ನದಾಫ್ ವಕೀಲರು, ಸಮಾಜ ಸೇವಕರಾದ ಅನ್ವರ ಶಿರಹಟ್ಟಿ, ವೀರಯ್ಯ ಬರದೂರಮಠ, ಹಾಜೀ ಜೀವನಸಾಬ ಮಂಗಳೂರು, ಇಮಾಮಸಾಬ ಜಾಫರ ಢಾಲಾಯತ, ಶಂಕರಗೌಡ್ರು, ನಾಗರಾಜ ಖೋಡೆ, ಶಿವು ಮಧುರಕರ, ಇಲಿಯಾಸ ಹುಬ್ಬಳ್ಳಿ, ಆಸಿಫ್ ಹುಬ್ಬಳ್ಳಿ ಮುಂತಾದವರು ಭಾಗವಹಿಸಿದ್ದರು.

### ಶ್ರೀ ಗುರು ಹಾನಗಲ್ಲ ಗುರು ಕುಮಾರೇಶ್ವರರ ಪುರಾಣ ಕಾರ್ಯಕ್ರಮದಲ್ಲಿ ಮುಪ್ಪಿನ ಬಸವಲಿಂಗ ಶ್ರೀಗಳು

# ಗುರು-ವಿರಕ್ತರು ಎಂದಿಗೂ ಒಂದಾಗಿರಬೇಕು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗುರು-ವಿರಕ್ತರು ಬೇರೆ ಬೇರೆಯಲ್ಲ. ಅವರು ಎಂದಿಗೂ ಒಂದಾಗಿರಬೇಕು. ಇಬ್ಬರೂ ಮಾಡುತ್ತಿರುವುದು ಒಂದೇ ಕಾರ್ಯ. ಇದರಲ್ಲಿ ಯಾವುದೇ ಭೇದ-ಭಾವ ಬೇಡ. ಇದು ಶ್ರೀ ಹಾನಗಲ್ಲ ಗುರು ಕುಮಾರೇಶ್ವರರ ಆಶಯವೂ ಆಗಿತ್ತು ಎಂದು ಹಾಲಕೆರೆ ಸಂಸ್ಥಾನದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಹೇಳಿದರು.

ನರೇಗಲ್ಲ ಹಿರೇಮಠದ ಜಾತ್ರಾಮಹೋತ್ಸವದ ಅಂಗವಾಗಿ ನಡೆದಿರುವ ಶ್ರೀ ಗುರು ಹಾನಗಲ್ಲ ಗುರು ಕುಮಾರೇಶ್ವರರ ಪುರಾಣ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ನಮ್ಮ ಗುರುಗಳಾಗಿದ್ದ ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರ ಕನಸೂ ಸಹ ಅದೇ ಆಗಿತ್ತು. ಅದಕ್ಕಾಗಿಯೆ ನಮ್ಮ ಪಟ್ಟಾಧಿಕಾರದ ಸಮಯದಲ್ಲಿ ಧರ್ಮ ಧ್ವಜಾರೋಹಣವನ್ನು ಅವರು ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶ್ರೀಗಳವರಿಂದಲೆ ಮಾಡಿಸಿದ್ದರು. ಹಾನಗಲ್ಲ ಶ್ರೀಗಳವರ ಪುರಾಣವು ಎಲ್ಲ ಸ್ವಾಮಿಗಳು ತಮ್ಮ ಆತ್ಮಾವಲೋಕನ ಮಾಡಿಕೊಳ್ಳುವಂತಿದೆ. ಅವರು ತಮಗಾಗಿ ಎಂದಿಗೂ ಬದುಕದೆ



ಸಮಾಜಕ್ಕಾಗಿ, ಸಮಾಜೋದ್ಧಾರಕ್ಕಾಗಿ ಬದುಕಿದರು. ಇವರು ಜನಿಸಿ ಬರುತ್ತಾರೆ ಎಂಬ ಭವಿಷ್ಯವನ್ನು ಗಟ್ಟಿವಾಳಯ್ಯ ಎಂಬ ಶರಣರು ಒಂಬೈನೂರು ವರ್ಷಗಳ ಹಿಂದೆಯೆ ಹೇಳಿದ್ದರು. ಅದು ನಿಜವಾಯಿತಲ್ಲದೆ ಒಡೆದು ಛಿದ್ರವಾಗಿ ಹೋದ ವೀರಶೈವ ಸಮಾಜವನ್ನು ಮತ್ತೆ ಒಂದುಗೂಡಿಸುವಲ್ಲಿ ಅವರ ಪಾತ್ರ ದೊಡ್ಡದು ಎಂದು ಶ್ರೀಗಳು ಹೇಳಿದರು.

ಶ್ರೀ ಅನ್ನದಾನ ಸಂಸ್ಥೆಯಿಂದ ಶೈಕ್ಷಣಿಕ ಸಂಸ್ಥೆಗಳು ಪ್ರಾರಂಭವಾಗಲು ಹಾನಗಲ್ಲ ಕುಮಾರೇಶ್ವರರೆ ಮೂಲ ಕಾರಣ. ಅವರ ಪ್ರೇರಣೆಯಿಂದ ಬೆತ್ತದ ಅಜ್ಜನವರು ಅನುಷ್ಠಾನಕ್ಕೆ ಕುಳಿತದ್ದು ಮತ್ತು ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಿದ್ದು. ಕನ್ನಡ ನಾಡಿನ ಮಠಗಳನ್ನು ಉಳಿಸಿ, ಬೆಳೆಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ತಮ್ಮ ಜೀವನದ ಪ್ರತಿ ಕ್ಷಣವನ್ನು ಸಮಾಜದ ಉದ್ಧಾರಕ್ಕಾಗಿಯೆ ತೇಯ್ದವರು ಕುಮಾರೇಶ್ವರರು. ಭೌತಿಕ ವಸ್ತುಗಳಿಂದ ಯಾವ ಸುಖವೂ ಇಲ್ಲ. ಅಂತರಂಗದಲ್ಲಿ ಪರಿವರ್ತನೆಯಾದಾಗ ಮಾತ್ರ ಮನುಷ್ಯನಲ್ಲಿ ಏನಾದರೂ ಬದಲಾವಣೆಯಾಗಲು ಸಾಧ್ಯ. ಇಂತಹ ಬದಲಾವಣೆಯನ್ನು ನಿಮ್ಮಲ್ಲಿ ತರಲು ಶ್ರೀ ಮಲ್ಲಿಕಾರ್ಜುನ ಶ್ರೀಗಳವರು ಈ ಜಾತ್ರಾ ಮಹೋತ್ಸವವನ್ನು ಏರ್ಪಡಿಸಿ, ಪುರಾಣವನ್ನು ಹಚ್ಚಿ ನಿಮ್ಮೆಲ್ಲರಿಗೂ ಸಂಸ್ಕಾರದ ರಸದೌತಣವನ್ನೇ ಉಣಬಡಿಸುತ್ತಿದ್ದಾರೆ. ಇದು ಶ್ಲಾಘನೀಯ ಎಂದರು.

ಪಂ. ಅನ್ನದಾನ ಶಾಸ್ತ್ರಿಗಳು ಮಾತನಾಡಿ, ಶಿವಯೋಗ ಮಂದಿರ ಸ್ಥಾಪನೆಯಲ್ಲಿ ಕುಮಾರೇಶ್ವರರ ಪಾತ್ರ ಬಹಳಷ್ಟು ದೊಡ್ಡದಿದೆ. ನೀವು ಶಿವಯೋಗ ಮಂದಿರದ ಸೇವೆಯನ್ನು ಎಂದಿಗೂ ಮಾಡಿ ಪುಣ್ಯ ಸಂಪಾದಿಸಿಕೊಳ್ಳಿ. ಹಾನಗಲ್ಲ ಕುಮಾರೇಶ್ವರರ ಕ್ರಿಯಾಶೀಲತೆಗೆ ಶಿವಯೋಗ ಮಂದಿರವೇ ಸಾಕ್ಷಿಯಾಗಿದೆ ಎಂದರು.

ನೇತೃತ್ವ ವಹಿಸಿದ್ದ ಶ್ರೀ ಮಲ್ಲಿಕಾರ್ಜುನ ಶ್ರೀಗಳವರು ಆಶೀರ್ವಚನ ನೀಡಿ, ನಿರ್ಜೀವ ಸಮಾಜವನ್ನು ಸಜೀವಗೊಳಿಸಿದವರು ಕುಮಾರೇಶ್ವರರು. ಸಂಸ್ಕಾರವಿಲ್ಲದ ಸಮಾಜ ಸಮಾಜವೇ ಅಲ್ಲ. ಆದ್ದರಿಂದ ನೀವು ಮತ್ತು ನಿಮ್ಮ ಮಕ್ಕಳು ಮೊದಲು ಸಂಸ್ಕಾರವಂತರಾಗಿರಿ. ಕುಮಾರೇಶ್ವರರ ವಾಣಿ ಎಂದಿಗೂ ಎಲ್ಲರಿಗೂ ಅವಶ್ಯಕ. ಅದನ್ನೆ ಶ್ರೀ ಮುಪ್ಪಿನ ಬಸವಲಿಂಗ ಶ್ರೀಗಳು ಹೇಳಿದ್ದಾರೆ ಎಂದರು.

# ಇಂದು ಪ್ರಾಚ್ಯಾವಶೇಷಗಳ ಅನ್ವೇಷಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರವಾಸೋದ್ಯಮ ಇಲಾಖೆ ಬೆಂಗಳೂರು, ಮೈಸೂರಿನ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಹಾಗೂ ಗ್ರಾಮ ಪಂಚಾಯತ್ ಲಕ್ಕುಂಡಿ ಇವರ ಸಹಯೋಗದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ಪ್ರಾಚ್ಯಾವಶೇಷಗಳ ಅನ್ವೇಷಣೆಯನ್ನು ನವೆಂಬರ್ 24 ರಂದು ರವಿವಾರ ಬೆಳಿಗ್ಗೆ 9:30 ಘಂಟೆಗೆ ಲಕ್ಕುಂಡಿ ಯ ಶ್ರೀ ಹಾಲಗುಂಡಿ ಬಸವೇಶ್ವರ ದೇವಸ್ಥಾನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಪ್ರಾಚ್ಯಾವಶೇಷಗಳ ಅನ್ವೇಷಣೆಗೆ ಚಾಲನೆ ನೀಡಲಿದ್ದಾರೆ.

ನರಗುಂದ ವಿಧಾನಸಭೆ ಶಾಸಕರಾದ ಸಿ ಸಿ ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ್ ಶೆಟ್ಟರ್, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಲಕ್ಕುಂಡಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಕೆಂಚಪ್ಪ ಎಸ್ ಪೂಜಾರ್, ಉಪಾಧ್ಯಕ್ಷೆ ಪುಷ್ಪಾ ಎಸ್.ಪಾಟೀಲ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿಗಳಾದ ಸಲ್ಮಾ ಫಾಹಿಮ್, ಕರ್ನಾಟಕ ಲೋಕಸೇವಾ ಆಯೋಗ ಮುಖ್ಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಪ್ರವಾಸೋದ್ಯಮ ಇಲಾಖೆ ನಿರ್ದೇಶಕರು ಡಾ.ಕೆ.ವಿ.ರಾಜೇಂದ್ರ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಮೈಸೂರಿನ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರಾದ ದೇವರಾಜು.ಎ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ರಾಜ್ಯ ಸಮಿತಿ ಸದಸ್ಯರಾದ ಸಿ.ಜಿ.ಬೆಟಸೂರಮಠ, ಸಿದ್ಧಲಿಂಗೇಶ್ವರ ಎಚ್ ಪಾಟೀಲ, ಶ್ರೀಮತಿ ಗೀತಾಂಜಲಿ ರಾವ್, ಅ.ಧ.ಕಟ್ಟಿಮನಿ, ಉಪಾಧ್ಯಕ್ಷರು ಮತ್ತು ಲಕ್ಕುಂಡಿ ಗ್ರಾಮ ಪಂಚಾಯತಿಯ ಸರ್ವ ಸದಸ್ಯರು ವಿಶೇಷ ಆಹ್ವಾನಿತರಾಗಿ ಆಗಮಿಸಲಿದ್ದಾರೆ.

ಬೆಂಗಳೂರಿನ (ವಸ್ತು ಸಂಗ್ರಹಾಲಗಳು)ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ನಿರ್ದೇಶಕರಾದ ಡಾ.ಡಿ.ಸ್ಮಿತಾ, ಮೈಸೂರಿನ (ಪುರಾತತ್ವ) ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ನಿರ್ದೇಶಕರಾದ ಡಾ.ಶೇಜೇಶ್ವರ ಆರ್, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಆಯುಕ್ತರು ಡಾ. ಶರಣು ಗೋಗೇರಿ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ಲಕ್ಕುಂಡಿ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರಾಜಕುಮಾರ ಎಚ್ ಭಜಂತ್ರಿ, ಲಕ್ಕುಂಡಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಪ್ರದೀಪ್ ಆಲೂರ ಸ್ವಾಗತ ಕೋರಿದ್ದಾರೆ.

## ನಿಧನ



### ಹೇಮಲತಾ ನಾಮದೇವ ಶಿರೋಳ

ಲಕ್ಷ್ಮೇಶ್ವರ: ಪಟ್ಟಣದ ಉಪನಾಳ ನಗರದ ಹಿರಿಯ ನಿವಾಸಿ ಹೇಮಲತಾ ನಾಮದೇವ ಶಿರೋಳ (78) ಅವರು ಶನಿವಾರ ನಿಧನರಾದರು. ಮೃತರಿಗೆ ಮೂವರು ಪುತ್ರಿಯರು, ಇಬ್ಬರು ಪುತ್ರರು ಸೇರಿ ಅಪಾರ ಬಂಧು-ಬಳಗವಿದೆ.

### ಗೂಳಪ್ಪ ಹುಳಕನವರ



ಲಕ್ಷ್ಮೇಶ್ವರ: ಪಟ್ಟಣದ ಸೊಪ್ಪಿನಕೇರಿ ಓಣಿಯ ಪ್ರಗತಿಪರ ರೈತ ಗೂಳಪ್ಪ ವಿರುಪಾಕ್ಷಪ್ಪ ಹುಳಕನವರ (67) ಶನಿವಾರ ನಿಧನರಾದರು. ಮೃತರಿಗೆ ಪತ್ನಿ, ಇಬ್ಬರು ಪುತ್ರರು ಸೇರಿ ಅಪಾರ ಬಂಧು-ಬಳಗವಿದೆ.

# ಲಿಂ. ಅಭಿನವ ಅನ್ನದಾನ ಶ್ರೀಗಳು ಮಹಾಮಹಿಮರು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಲಿಂ. ಡಾ. ಅಭಿನವ ಅನ್ನದಾನ ಸ್ವಾಮೀಜಿಗಳು ಕ್ರಿಯಾಶೀಲ ವ್ಯಕ್ತಿತ್ವದವರಾಗಿದ್ದರು. ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಿದ್ದ ಅವರು, ಶೈಕ್ಷಣಿಕ ಕ್ರಾಂತಿಯ ಹರಿಕಾರರೂ ಆಗಿದ್ದರು. ವಿಶೇಷವಾಗಿ ಹೆಣ್ಣುಮಕ್ಕಳ ಅಭ್ಯುದಯಕ್ಕಾಗಿ ಮಹಿಳಾ ವಿಚಾರ ಸಂಕಿರಣ, ಮಹಿಳೆಯರಿಗಾಗಿ ಬೆಳ್ಳಿ ತೇ-ೀರು, ಮುತ್ತೈದೆಯರಿಗೆ ಉಡಿ ತುಂಬುವುದರ ಮೂಲಕ ನಿರಂತರ ಕಾರ್ಯ ನಿರ್ವಹಿಸಿರುವ ಮಹಾ ಮಹಿಮರು ಎಂದು ಎಸ್‌ಎವಿವಿಪಿ ಸಮಿತಿಯ ಆಡಳಿತಾಧಿಕಾರಿ ಎನ್.ಆರ್. ಗೌಡರ ಹೇಳಿದರು.

ಪಟ್ಟಣದ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಡಾ. ಅಭಿನವ ಅನ್ನದಾನ ಸ್ವಾಮೀಜಿಯವರ 3ನೇ ಪುಣ್ಯ ಸ್ಮರಣೋತ್ಸವದಲ್ಲಿ ಅವರು ಮಾತನಾಡಿದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿನಿಯರು ವಿಜ್ಞಾನ, ಗಣಿತ ಹಾಗೂ ಎಲ್ಲ ವಿಷಯಗಳ ಕುರಿತಾಗಿ ತಮ್ಮದೇ ಆದ ಸರಳ ಭಿತ್ತಿಪತ್ರಗಳು, ಮಾದರಿಗಳು, ಪ್ರಯೋಗಗಳನ್ನು ಪ್ರದರ್ಶಿಸಿ ಪುಣ್ಯಸ್ಮರಣೋತ್ಸವಕ್ಕೆ ಹೊಸ ಮೆರಗನ್ನು ತಂದುಕೊಟ್ಟು, ಸ್ವಾಮೀಜಿಯವರ ಶೈಕ್ಷಣಿಕ ಕಾಳಜಿಗೆ ಸಾಕ್ಷಿಯಾದರು.

ಮುಖ್ಯ ಶಿಕ್ಷಕ ಎಸ್. ಎನ್. ಹೂಲಗೇರಿ ಅಧ್ಯಕ್ಷತೆ ವಹಿಸಿದ್ದರು. ಮಲ್ಲಿಕಾರ್ಜುನಪ್ಪ ಮೆಣಸಗಿ, ನಿಂಗನಗೌಡ ಲಕ್ಕನಗೌಡ್ರ, ಎ.ಟಿ. ಮಳ್ಳಳ್ಳಿ, ಎಂ.ಎಸ್. ಅತ್ತಾರ, ಎಸ್. ಎಫ್. ಧರ್ಮಾಯತ, ಬಿ.ಡಿ. ಯರಗೊಪ್ಪ, ಎಸ್.ಶಿವಮೂರ್ತಿ, ಕೆ.ಸಿ. ಜೋಗಿ, ಆರ್.ಎಂ. ಗುಳಬಾಳ, ವಿ.ಕೆ. ಚುಳಕಿ, ಎಸ್.ಬಿ. ಕುರುಡಗಿ, ಬಸಮ್ಮ ಅಸುಂಡಿ ಸೇರಿದಂತೆ ಸಿಬ್ಬಂದಿ ಇದ್ದರು.

# ‘ಆದರ್ಶ ದಂಪತಿ’ ಪ್ರಶಸ್ತಿಗೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ಗ್ರಾಮೀಣ ಯುವ ಕನ್ನಡ ಸಾಹಿತ್ಯ ಕ್ರೀಯಾ ಸಮಿತಿ ಸುಕ್ಷೇತ್ರ ಮೈಲಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವಿಜಯನಗರ ಜಿಲ್ಲೆ, ಕಾರ್ಯನಿರತ ಪತ್ರಕರ್ತರ ಸಂಘ ಹೂವಿನ ಹಡಗಲಿ, ಸುವರ್ಣ ಕರ್ನಾಟಕ ಬಹುಜನ ಸಂಘ ರಾಜ್ಯ ಮಹಿಳಾ ಘಟಕ ಬೆಂಗಳೂರು, ಗ್ರಾಮ ಪಂಚಾಯಿತಿ ಹಾಗೂ ಸಮಸ್ತ ನಾಗರಿಕರು ಮೈಲಾರ ಇವರುಗಳ ಸಹಕಾರದೊಂದಿಗೆ ತ್ರಿಪದಿಗಳ ಹರಿಕಾರ ಬಸವಲಿಂಗ ಶರಣರು ಮೈಲಾರ, ಶರಣೆ ದಿ. ಗಿರಿಜಮ್ಮ, ದಿ. ಶಂಕ್ರಪ್ಪ ಪುಟ್ಟಪ್ಪ ತಂಬೂರಿ, ಶರಣೆ ದಿ. ಪವಿತ್ರ ಚನ್ನಬಸಪ್ಪ ತಂಬೂರಿ ಮೈಲಾರ ಇವರುಗಳ ಸ್ಮರಣೋತ್ಸವದ ನಿಮಿತ್ತ ಕರ್ನಾಟಕ ರಾಜ್ಯೋತ್ಸವ ಸಂಭ್ರಮ, ಕರ್ನಾಟಕ ಗ್ರಾಮೀಣ ಕನ್ನಡ ನುಡಿ ಹಬ್ಬ-2024ರ ಅಂಗವಾಗಿ ಸಾಧಕರಿಗೆ ಕೊಡಮಾಡುವ ‘ಗಿರಿಜಾ ಶಂಕರ ಕನ್ನಡ ಗ್ರಾಮೀಣ ರತ್ನ’ ಆದರ್ಶ ದಂಪತಿ ರಾಜ್ಯ ಗೌರವ ಪ್ರಶಸ್ತಿಗೆ ಮುಂಡರಗಿ ತಾಲೂಕಿನ ಜಂತಲಿ ಶಿರೂರು ಗ್ರಾಮದ ಭಾಗ್ಯಶ್ರೀ ಗವಿಶಿದ್ಧಯ್ಯ ಹಳ್ಳಿಕೇರಿಮಠ ದಂಪತಿಯನ್ನು ಆಯ್ಕೆ ಮಾಡಲಾಗಿದೆ.

ನ. 24ರಂದು ಶರಣ ಜಯಪ್ರಕಾಶ ನಾರಾಯಣ ಕಲಾ ಮಂದಿರದ ಗಿರಿಜಾ ಶಂಕರ ವೇದಿಕೆ ಸುಕ್ಷೇತ್ರ ಮೈಲಾರದಲ್ಲಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

# ಧರ್ಮದ ಹಾದಿಯಲ್ಲಿ ಜೀವನ ನಿರ್ವಹಿಸಿ



■ವಿಜಯಸಾಕ್ಷಿ ಸುದ್ದಿ, ರೋಣ

ಮಾನವರಾದ ನಾವು ಧರ್ಮದ ಹಾದಿಯಲ್ಲಿ ಜೀವನ ನಿರ್ವಹಿಸಬೇಕು ಎಂದು ಮುಖಂಡ ಚಂದ್ರು ಮಾರನಬಸರಿ ಹೇಳಿದರು.

ಅವರು ಶನಿವಾರ ಸಂಜೆ ಮಾರನಬಸರಿ ಗ್ರಾಮದ ಸರ್ವಧರ್ಮ ಸಮನ್ವಯ ಪೀಠ ಲೋಕಾರ್ಪಣೆ ಕಾರ್ಯಕ್ರಮ ನಿಮಿತ್ತ ಜರುಗಿದ ಧಾರ್ಮಿಕ ಪ್ರವಚನ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ಗ್ರಾಮದಲ್ಲಿ ಸರ್ವಧರ್ಮ ಸಮನ್ವಯ ಪೀಠ ಸ್ಥಾಪನೆಯಾಗಿದ್ದು ಭಕ್ತರಿಗೆ ಸಂತಸ ತಂದಿದೆ. ಮಾರನಬಸರಿ ಗ್ರಾಮದ ಜನರು ಧಾರ್ಮಿಕ ಕಾರ್ಯಗಳಲ್ಲಿ ನಂಬಿಕೆಯನ್ನು ಇಟ್ಟುಕೊಂಡವರು. ಗ್ರಾಮದಲ್ಲಿರುವ ಸರ್ವಧರ್ಮದವರು ಸಹ ಎಲ್ಲ ಧಾರ್ಮಿಕ ಆಚರಣೆಗಳನ್ನು ಆಚರಿಸುತ್ತಾ ಸೌಹಾರ್ದತೆಯನ್ನು ಮೆರೆದವರು. ಹೀಗಾಗಿ, ಸರ್ವಧರ್ಮ ಸಮನ್ವಯ ಪೀಠದಿಂದ ಗ್ರಾಮದ ಭಕ್ತಿಯ ಕೀರ್ತಿ ಮತ್ತಷ್ಟು ಹೆಚ್ಚಲಿದೆ ಎಂದರು.

ಕೃಷಿ ವಿಷಯವಾಗಿ ಪ್ರೊ. ವಸಂತರಾವ್ ಗಾರ್ಗಿ ಉಪನ್ಯಾಸ ನೀಡಿದರು. ಶಿವಮೂರ್ತಿ ಶ್ರೀಗಳು ಸಾನ್ನಿಧ್ಯ ವಹಿಸಿದ್ದರು. ಶಿವಯೋಗಿ ದೇವರು ಸಮ್ಮುಖ ವಹಿಸಿದ್ದರು. ಗದಿಗೆಯ್ಯ ದೇವರ ವಿರಕ್ತಮಠ ಧಾರ್ಮಿಕ ಪುರಾಣ ಪ್ರವಚನ ನಡೆಸಿಕೊಟ್ಟರು.

ವೇ.ಮೂ.ಚನ್ನಯ್ಯನವರು ಹಿರೇಮಠ, ಮಂಜುಳಾ ಮಾದರ, ಸಂಗನಬಬಸ್ಸಪ್ಪ ಹಾದಿಮನಿ, ಮರ್ತುಜಸಾಬ ಮೋತೆಖಾನ್, ಹನಮಂತಪ್ಪ ಹುಯಿಲಗೋಳ, ಅಲ್ಲಾಸಾಬ ಮೋತೆಖಾನ್ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು. ಶಂಭುಗೌಡ ಪಾಟೀಲ ನಿರೂಪಿಸಿದರು, ಎಸ್.ಬಿ. ಪೂಜಾರ ವಂದಿಸಿದರು.

# ಅಗಡಿ ಪ.ಪೂ ಕಾಲೇಜು ಕಟ್ಟಡಕ್ಕೆ ಭೂಮಿಪೂಜೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಕಮಲಾ ಮತ್ತು ವೆಂಕಪ್ಪ ಎಂ.ಅಗಡಿ ಪದವಿಪೂರ್ವ ಕಾಲೇಜಿನ ಕಟ್ಟಡ ನಿರ್ಮಾಣದ ಭೂಮಿ ಪೂಜೆ ಕಾರ್ಯಕ್ರಮವನ್ನು ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯ ರಘು ಬೆಳಗೋಡು ಹಾಗೂ ಸಂಸ್ಥೆಯ ಸದಸ್ಯ ಪಾತ್ರೆ ಪ್ರಭಾಕರ ಶೆಟ್ಟಿ ದಂಪತಿಗಳು ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ಗ್ರಾಮೀಣ ಪ್ರದೇಶಗಳ ವಿದ್ಯಾರ್ಥಿಗಳಿಗೂ ಮಹಾನಗರಗಳಲ್ಲಿ ಸಿಗುವ ಗುಣಮಟ್ಟದ ಶಿಕ್ಷಣ ಸಿಗಬೇಕೆಂಬ ಸದುದ್ದೇಶದಿಂದ ಲಕ್ಷ್ಮೇಶ್ವರದ ಶಿಕ್ಷಣ ಪ್ರೇಮಿ ದಿ. ವೆಂಕಪ್ಪ ಎಂ. ಅಗಡಿಯವರು ಕಟ್ಟಿ ಬೆಳೆಸಿದ ಇಂಜಿನಿಯರಿಂಗ್ ಕಾಲೇಜು ಇಂದು ಶ್ರೇಷ್ಠತೆಗೆ ಹೆಸರಾಗಿದೆ. ಇದಕ್ಕೆ ಪೂರಕವೆಂಬಂತೆ ಪದವಿಪೂರ್ವ ಶಿಕ್ಷಣ ನೀಡಬೇಕೆಂಬ ಹಂಬಲದಿಂದ ತಂದೆಯ ದಾರಿಯಲ್ಲಿಯೇ ಹರ್ಷವರ್ಧನ ಅಗಡಿ ದಂಪತಿಗಳು ಗುಣಮಟ್ಟ, ಹೊಸತನ, ಶಿಸ್ತಿನೊಂದಿಗೆ ಪಿಯುಸಿ ಶಿಕ್ಷಣ ಆರಂಭಿಸಿ ಕಾಲೇಜಿನ ಕ್ಯಾಂಪಸ್‌ನಲ್ಲಿಯೇ ಪ್ರತ್ಯೇಕವಾದ ಸುಸಜ್ಜಿತ ಪಿಯು ಕಾಲೇಜು ಕಟ್ಟಡ ನಿರ್ಮಾಣ ಮಾಡುತ್ತಿರುವುದು ಶ್ಲಾಘನೀಯ. ಇದರಿಂದ ಎಸ್‌ಎಸ್‌ಎಲ್‌ಸಿ ನಂತರ ಪಿಯು ಶಿಕ್ಷಣಕ್ಕಾಗಿ ದೂರದೂರಿಗೆ ಹೋಗದೇ ತಮ್ಮ ಊರಲ್ಲಿಯೇ ಶಿಕ್ಷಣ ಪಡೆಯಲು ಅನಕೂಲವಾಗಲಿದೆ. ಅಗಡಿ ಅವರು ಬಡವರು ಮತ್ತು ಮದ್ಯಮ ವರ್ಗದ ಜನರ ಅನಕೂಲದ ಜತೆಗೆ ಶಿಕ್ಷಣ, ಆರೋಗ್ಯ, ಧಾರ್ಮಿಕ ಕ್ಷೇತ್ರದಲ್ಲಿ ಶ್ರೇಷ್ಠ ಸೇವೆ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಅನಿತಾ ರಘು ಬೆಳಗೋಡ, ಲಕ್ಷ್ಮೀ ಪ್ರಭಾಕರ ಶೆಟ್ಟಿ, ಅಗಡಿ ಇಂಜಿನಿಯರಿಂಗ್ ಮಹಾವಿದ್ಯಾಲಯದ ಪ್ರಾಚಾರ್ಯ ಪರಶುರಾಮ ಬಾರ್ಕಿ, ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎನ್. ಹಯವದನ, ಆಡಳಿತಾಧಿಕಾರಿ ವಿಕ್ರಮ್ ಶಿರೋಳ, ರವಿಪ್ರಕಾಶ, ಅಗಡಿ ಸನ್‌ರೈಸ್ ಆಸ್ಪತ್ರೆಯ ಮುಖ್ಯಸ್ಥ ಡಾ. ರಾಜಶೇಖರ ಮೂಲಿಮನಿ, ಡಾ. ಸುಜಾತಾ ಸಂಗೂರ, ಆರ್ಕಿಟೆಕ್ಚರ್ ನಳಿನಿ ಕೆಂಭಾವಿ, ಅಧ್ಯಾಪಕ ವೃಂದ, ಸಿಬ್ಬಂದಿವರ್ಗ, ವಿದ್ಯಾರ್ಥಿಗಳು ಇದ್ದರು.

# ಸರ್ದಾರ್ ಪಟೇಲ ಸ್ಮರಣಾರ್ಥ ಏಕತಾ ಓಟ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ನೆಹರು ಯುವ ಕೇಂದ್ರ ಗದಗ ಮತ್ತು ಶ್ರೀ ಎಫ್.ಬಿ. ಪೂಜಾರ್ ಸರಕಾರಿ ಪದವಿಪೂರ್ವ ಕಾಲೇಜು, ರಾಷ್ಟ್ರೀಯ ಸೇವಾ ಯೋಜನೆ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಶಿರಹಟ್ಟಿ ತಾಲೂಕಿನ ಕಡಕೋಳ ಗ್ರಾಮದ ಬಸವರಾಜ್ ಮ.ಕೊಂಚಿಗೇರಿ ಸರಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ಏಕತೆಗಾಗಿ ಓಟ ಮತ್ತು ಸಂಕಲ್ಪ @2047 ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.




ಭೂದಾನಿಗಳಾದ ವೈದ್ಯ ಚನ್ನವೀರಪ್ಪ ಕೊಂಚಿಗೇರಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯರಾದ ಕನಕಮ್ಮ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ಉತ್ತಮವಾಗಿ ರೂಪಿಸಿಕೊಳ್ಳಲು ಸಲಹೆಗಳನ್ನು ನೀಡಿದರು. ಮುಖ್ಯ ಅತಿಥಿಗಳಾಗಿ ತಿಪ್ಪಣ್ಣ ಕೊಂಚಿಗೇರಿ, ಹೇಮಾ ಹರ್ಲಾಪುರ, ಸಂಗಮೇಶ ನೀರಲಗಿ, ವೀರೇಂದ್ರ ಗೌಡ ಪಾಟೀಲ್, ಈರಯ್ಯ ಪಾಟೀಲ್, ಸಿದ್ಧಲಿಂಗ ಅಂಗಡಿ, ಬಸವರಾಜ್ ಗಿರಿತಮ್ಮನವರ್, ಕೊಟ್ರಯ್ಯ ಹೊಂಬಾಲಮಠ, ರವಿಕುಮಾರ್ ಹೊಂಬಾಳಿ ಪಾಲ್ಗೊಂಡಿದ್ದರು.

ಲಿಂಗರಾಜ್ ಯತ್ನಹಳ್ಳಿ ಸ್ವಾಗತಿಸಿದರೆ, ಶರಣಪ್ಪ ಕಲಗುಡಿ ಕಾರ್ಯಕ್ರಮವನ್ನು ನಿರೂಪಿಸಿದರು. ಜ್ಯೋತಿ ಅಡವಿ ವಂದಿಸಿದರು. ಪರಸಪ್ಪ ತಳವಾರ್, ಮಂಜುನಾಥ್ ಹಾರ್ಲಾಪುರ, ರವಿ ನರೇಗಲ್ ಸೇರಿದಂತೆ ಕಾಲೇಜಿನ ಎಲ್ಲಾ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಬಸವ ಯೋಗ ಕೇಂದ್ರದ ರಜತ ಮಹೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಗದಗ ಸಂಸ್ಥೆಯ ರಜತ ಮಹೋತ್ಸವ (ಬೆಳ್ಳಿಹಬ್ಬ) ಸಿದ್ಧಲಿಂಗ ನಗರದಲ್ಲಿನ ಬಸವಯೋಗ ಮಂದಿರದಲ್ಲಿ ನ.24ರ ಸಾಯಂಕಾಲ 5.30ಕ್ಕೆ ಜರುಗಲಿದೆ.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಜ. ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ ಆಗಮಿಸುವರು. ಅಧ್ಯಕ್ಷತೆಯನ್ನು ಬಸವ ಯೋಗ ಚಿಂತನಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ ವಹಿಸುವರು. ರಾಜ್ಯ ಉತ್ತಮ ಶಿಕ್ಷಕ ಪ್ರಶಸ್ತಿ ವಿಜೇತ ಕೆ.ಸಿ. ಪಟ್ಟಣಶೆಟ್ಟಿ ಗುರುಗಳು ಮತ್ತು ಪಿ.ಎಚ್.ಡಿ. ಪದವಿ ಪಡೆದ ಡಾ. ತೇಜ ಸಿ.ಹಿರೇಮಠರನ್ನು ಸನ್ಮಾನಿಸಲಾಗುವುದು.

ರೋಣದ ರಾಜೀವಗಾಂಧಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಪ್ರಾಚಾರ್ಯ ಡಾ. ಆಯ್.ಬಿ. ಕೊಟ್ಟೂರಶೆಟ್ಟಿ ಪಾಲ್ಗೊಳ್ಳುವರು. ಕಾರ್ಯಕ್ರಮದಲ್ಲಿ ವಿಶೇಷವಾಗಿ ಬಸವ ಯೋಗ ಕೇಂದ್ರಕ್ಕೆ 'ಬಸವ ಯೋಗ ಮಹಾವಿದ್ಯಾಲಯ' ಎಂದು ಮರುನಾಮಕರಣೋತ್ಸವ, ಕರ್ನಾಟಕ ಸಂಭ್ರಮ–50, ಸಾಧಕರಿಗೆ ಸನ್ಮಾನ, ಯೋಗ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುವವು.

ಈ ಕಾರ್ಯಕ್ರಮಕ್ಕೆ ಯೋಗಾಸಕ್ತರು, ಯೋಗ ಅಭಿಮಾನಿಗಳು, ಬಸವ ಯೋಗ ಕೇಂದ್ರದ ಪದಾಧಿಕಾರಿಗಳು ಮತ್ತು ಸದಸ್ಯರು ಹಾಗೂ ವಿದ್ಯಾರ್ಥಿ ವೃಂದ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸದಸ್ಯರು, ಸಾಧಕರೆಲ್ಲರೂ ಆಗಮಿಸಿ ಶೋಭೆ ತರಬೇಕೆಂದು ಪ್ರಾಚಾರ್ಯ ಕೆ.ಎಸ್. ಪಲ್ಲೇದ ತಿಳಿಸಿದ್ದಾರೆ.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಕನಕದಾಸರ ಆದರ್ಶಗಳು ಸಾರ್ವಕಾಲಿಕ

■ವಿಜಯಸಾಕ್ಷಿ ಸುದ್ದಿ, ಗದಗ

ಕನಕದಾಸರು ತಮ್ಮ ಕೀರ್ತನೆಗಳ ಮೂಲಕ ಸಮಾಜದ ಅಂಕು–ಡೊಂಕುಗಳನ್ನು ತಿದ್ದಿದ್ದಾರೆ. ಕೀರ್ತನಕಾರರಾಗಿ, ಸಂತರಾಗಿ, ಸಮಾಜ ಸುಧಾರಕರಾಗಿ ಅವರು ಕನ್ನಡ ನಾಡು–ನುಡಿ, ಸಾಂಸ್ಕೃತಿಕ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅನನ್ಯವಾದುದು ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮಾತನಾಡಿದರು.

ತೋಂಟದಾರ್ಯ ಮಠದಲ್ಲಿ ಜರುಗಿದ 2720ನೇ ಶಿವಾನುಭವ ಕಾರ್ಯಕ್ರಮದದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಪೂಜ್ಯರು, ಕನ್ನಡ ನಾಡ–ನುಡಿ, ಸಂಸ್ಕೃತಿಯಲ್ಲಿ ಬೆರೆತು ಹೋದ ಒಬ್ಬ ಶ್ರೇಷ್ಠ ದಾಸವರೇಣ್ಯ ಕನಕದಾಸರು. ಕನಕದಾಸರ ಬದುಕು ಮತ್ತು ಆದರ್ಶಗಳು ಸಾರ್ವಕಾಲಿಕ. ಶರಣರ ವಚನ ಮತ್ತು ದಾಸರ ಪದಗಳು ಸಮಾಜದಲ್ಲಿ ಜಾತಿ, ಮತ, ಪಂಥ ಬೇಧಗಳನ್ನು ಅಳಿಸಿ ಸಮಾಜದ ಸ್ವಾಸ್ಥ್ಯವನ್ನು ಕಾಪಾಡುತ್ತವೆ ಎಂದರು.

ಕನಕದಾಸ ಜಯಂತಿಯ ನಿಮಿತ್ತ 'ಸಂತ ಶ್ರೇಷ್ಠ ಕನಕದಾಸರು' ಎಂಬ ವಿಷಯದ ಕುರಿತು ಧಾರವಾಡ ಆಕಾಶವಾಣಿ ಕಲಾವಿದರಾದ ಚಂದ್ರಶೇಖರ ವಡಿಗೇರಿಯವರು ಅವರ ಕೀರ್ತನೆಗಳ, ಮುಂಡಿಗೆಗಳ, ಕೃತಿಗಳ ಕುರಿತು ತಮ್ಮ ಉಪನ್ಯಾಸದಲ್ಲಿ ಬೆಳಕು ಚೆಲ್ಲಿದರು.

'ಕನ್ನಡ ಸಾಹಿತ್ಯದಲ್ಲಿ ಹಾಸ್ಯ' ಈ ವಿಷಯವಾಗಿ ಗದುಗಿನ ಕೆ.ವಿ.ಎಸ್.ಆರ್. ಕಾಲೇಜಿನ ನಿವೃತ್ತ ಪ್ರಾಚಾರ್ಯ ಅನಿಲ ವೈದ್ಯ ಮಾತನಾಡಿ, ನಿತ್ಯ ಜೀವನದಲ್ಲಿ ಹಾಸ್ಯ ಹೇಗೆ ಹಾಸುಹೊಕ್ಕಾಗಿದೆ ಎಂದು ತಮ್ಮ ಮನೆಯಿಂದ ಹಿಡಿದು ಸುತ್ತಮುತ್ತಲಿನ ವಾತಾವರಣದಲ್ಲಿ ಹಾಸ್ಯ ಹೇಗೆ ಕಂಡುಬರುತ್ತದೆ ಎಂಬುದನ್ನು ತಿಳಿಸುತ್ತಾ ನಗೆಯ ಹೊನಲನ್ನು ಹರಿಸಿದರು. ನಗು ಆರೋಗ್ಯದ ಮೇಲೆ ಪರಿಣಾಮ ಬೀರುವುದು. ನಗಬೇಕು ಮತ್ತೆ ಮತ್ತೆ ನಗಬೇಕು ಎಂದು ಹೇಳಿದರು.

ದೆಹಲಿಯಯ ರಾಷ್ಟ್ರೀಯ ಮಕ್ಕಳ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆದ ಬಾಲ ಕವಿಯತ್ರಿ ಪ್ರಣತಿ ರಾಜೇಂದ್ರ ಗಡಾದ ಇವರನ್ನು ಮಕ್ಕಳ ದಿನಾಚರಣೆ ನಿಮಿತ್ತ ಸನ್ಮಾನಿಸಲಾಯಿತು.

ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರವರು ಸಂಗೀತ ಸೇವೆ ನೆರವೇರಿಸಿದರು. ಧರ್ಮ ಗ್ರಂಥ ಪಠಣವನ್ನು ಸಂಕೇತ ಎಸ್.ತಕ್ಕಡಿ ಹಾಗೂ ವಚನ ಚಿಂತನವನ್ನು ಭುವನ್ ಎಸ್. ಅಕ್ಕಮ್ಮನವರ ಮಾಡಿದರು. ದಾಸೋಹ ಸೇವೆಯನ್ನು ಶರಣ ಹುಚ್ಚಣ್ಣ ಶಹಾಪೂರ, ಹಾಲೇಶ್ವರ ಟ್ರೇಡಿಂಗ್ ಕಂಪನಿ ಗದಗ ಇವರು ಸಲ್ಲಿಸಿದರು. ಮುಖ್ಯ ಅತಿಥಿಗಳಾಗಿ ಶರಣ ಫಕ್ಕೀರಪ್ಪ ಹೆಬಸೂರ ಉಪಸ್ಥಿತರಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಬಾಲಚಂದ್ರ ಭರಮಗೌಡ್ರ, ಕಾರ್ಯದರ್ಶಿಗಳಾದ ವೀರಣ್ಣ ಗೋಟಡಕಿ ಹಾಗೂ ಸಮಿತಿಯ ಸರ್ವ ಸದಸ್ಯರು ಉಪಸ್ಥಿತರಿದ್ದರು. ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸನ್ಮಾನಿತರನ್ನು ಪರಿಚಯಿಸಿದರು. ವಿದ್ಯಾ ಗಂಜಿಹಾಳ ಸ್ವಾಗತಿಸಿದರೆ, ಗೌರಕ್ಕ ಬಡಿಗಣ್ಣವರ ನಿರೂಪಿಸಿದರು.



ಕುವೆಂಪು ಭಾಷಾ ಭಾರತಿ ಪ್ರಾಧಿಕಾರದಿಂದ 2023ನೇ ಸಾಲಿನ ಅನುವಾದಿತ ಸಾಹಿತ್ಯ ಕೃತಿ 'ತೌಲನಿಕ ಧರ್ಮ ದರ್ಶನ'ವು ಪುಸ್ತಕ ಬಹುಮಾನ ಪಡೆದ ಪ್ರಯುಕ್ತ ಜಗದ್ಗುರು ಡಾ. ತೋಂಟದಾರ್ಯ ಸಿದ್ಧರಾಮ ಮಹಾಸ್ವಾಮಿಗಳವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಸರ್ವ ಪದಾಧಿಕಾರಿಗಳು ಭಕ್ತಿಪೂರ್ವಕ ಸಂಮಾನ ಮಾಡಿ ಅಭಿನಂದನಾ ಪತ್ರ ಪ್ರದಾನ ಮಾಡಿದರು.

# ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಕಾರ್ಯಕರ್ತರಿಂದ ಸಂಭ್ರಮಾಚರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾಂಗ್ರೆಸ್ ಪಕ್ಷದ ಜನಪರ ಆಡಳಿತವನ್ನು ಮೆಚ್ಚಿ ರಾಜ್ಯದ 3 ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಜನತೆ ಪಕ್ಷದ ಗೆಲುವಿಗೆ ಮತ ನೀಡಿದ್ದಾರೆ ಎಂದು ಲಕ್ಷ್ಮೇಶ್ವರ ನಗರ ಘಟಕದ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಮರೀಶ ತೆಂಬದಮನಿ ಹೇಳಿದರು.

ಅವರು ಶನಿವಾರ ರಾಜ್ಯದ 3 ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಜಯಗಳಿಸಿದ ಬಳಿಕ ಪಟ್ಟಣದ ಶಿಗ್ಲಿ ಕ್ರಾಸ್‌ನಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದ ಸಂದರ್ಭದಲ್ಲಿ ಮಾತನಾಡಿದರು.

ವಿರೋಧ ಪಕ್ಷದವರು ಕಾಂಗ್ರೆಸ್ ಪಕ್ಷದ ಮೇಲೆ ವಿನಾಕಾರಣ ಆರೋಪ ಮಾಡಿ ಪ್ರಚಾರ ಮಾಡಿದರೂ ಮತದಾರರು ಮಾತ್ರ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಿದ್ದಾರೆ. ಪಕ್ಷದ ಗ್ಯಾರಂಟಿ ಯೋಜನೆಗಳ ಜತೆಗೆ ಎಲ್ಲ ವರ್ಗದ ಜನರ ವಿಶ್ವಾಸ ಗಳಿಸುವಲ್ಲಿ ಪಕ್ಷ ಯಶಸ್ವಿಯಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಆಡಳಿತಕ್ಕೆ ಜನ ಮನ್ನಣೆ ನೀಡಿದಂತಾಗಿದ್ದು, ಇನ್ನಾದರೂ ಬಿಜೆಪಿ ಸುಳ್ಳು ಆರೋಪ, ಅಪಪ್ರಚಾರ ಕೈಬಿಡಬೇಕು ಎಂದರು.

ಬಳಿಕ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಕಾರ್ಯಕರ್ತರು ಬೈಕ್ ರ‍್ಯಾಲಿ ನಡೆಸಿ ಕಾಂಗ್ರೆಸ್ ಪರ ಘೋಷಣೆ ಕೂಗಿದರು. ಈ ವೇಳೆ ಪಕ್ಷದ ಮುಖಂಡರಾದ ಪದ್ಮರಾಜ ಪಾಟೀಲ, ಸೋಮಣ್ಣ ಬೆಟಗೇರಿ, ಪುರಸಭೆ ಸದಸ್ಯ ಬಸವರಾಜ ಓದುನವರ, ನೀಲಪ್ಪ ಶರಸೂರಿ, ಯಲಪ್ಪ ಸೂರಣಗಿ, ಬಾಬಣ್ಣ ಅಳವಂಡಿ, ನಾಗರಾಜ ದೊಡ್ಡಮನಿ, ಇಸ್ಮಾಯಿಲ್ ಆಡೂರ, ನೀಲಪ್ಪ ಪಡಗೇರಿ, ಕಿರಣ ನವಲೆ, ಪ್ರಕಾಶ ಕೊಂಚಿಗೇರಿಮಠ, ಅಣ್ಣಪ್ಪ ರಾಮಗೇರಿ, ಶಿದ್ದಲಿಂಗಯ್ಯ ಪಶುಪತಿಮಠ, ಅಪ್ಜಲ್ ರಿತ್ತಿ, ಮಂಜಪ್ಪ ಶರಸೂರಿ, ಸೋಮಣ್ಣ ಲಮಾಣಿ, ನಂದೀಶ ಚಕ್ರಸಾಲಿ, ಹನುಮಂತ ಶರಸೂರಿ, ಎಂ.ಎಂ. ಗಾಡಗೋಳಿ, ರಿಯಾಜ ಡಾಲಾಯತ್ ಸೇರಿ ಕಾಂಗ್ರೆಸ್ ಕಾರ್ಯಕರ್ತರಿದ್ದರು.




### ಔಟ್‌ರಿಚ್ ಸಂಸ್ಥೆಯಿಂದ 'ವೈಜ್ಞಾನಿಕ ಹೈನುಗಾರಿಕೆ' ತರಬೇತಿ ಶಿಬಿರ

# ಹೈನುಗಾರಿಕೆಯಿಂದ ಆರ್ಥಿಕ ಅಭಿವೃದ್ಧಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆಯರು ಹೈನುಗಾರಿಕೆಯನ್ನು ಉದ್ಯೋಗವನ್ನಾಗಿ ಮಾಡಿಕೊಂಡು ಆ ಮೂಲಕ ಆರ್ಥಿಕವಾಗಿ ಮುನ್ನಡೆ ಸಾಧಿಸಬಹುದಾಗಿದೆ ಎಂದು ಗದುಗಿನ ಪಶು ವೈದ್ಯಕೀಯ ಮಹಾವಿದ್ಯಾಲಯದ ಡೀನ್ ರಾಮಚಂದ್ರ ಬಿ ಅಭಿಪ್ರಾಯಪಟ್ಟರು.

ಅವರು ಗದುಗಿನ ಪಶುವೈದ್ಯಕೀಯ ಮಹಾವಿದ್ಯಾಲಯದಲ್ಲಿ ಕರ್ನಾಟಕ ಪಶು ವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರ, ಗದಗ ಪಶುವೈದ್ಯಕೀಯ ಮಹಾವಿದ್ಯಾಲಯ ಹಾಗೂ ಔಟ್‌ರಿಚ್ ಸಂಸ್ಥೆಯ ಆಶ್ರಯದಲ್ಲಿ ಏರ್ಪಡಿಸಿದ್ದ ಔಟ್‌ರಿಚ್ ಸಂಸ್ಥೆಯ ವಿಸ್ತರಣಾ ಕಾರ್ಯಕರ್ತರಿಗೆ 'ವೈಜ್ಞಾನಿಕ ಹೈನುಗಾರಿಕೆ' 2 ದಿನದ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಕೃಷಿ, ಕೃಷಿ ಅಧಾರಿತ ಉಪಕಸಬುಗಳು ಕೈಗೊಳ್ಳುವುದರೊಂದಿಗೆ ಮಹಿಳೆಯರು ಆರ್ಥಿಕವಾಗಿ ಸಬಲರಾಗಬೇಕು. ಸರ್ಕಾರ ಮಹಿಳಾ ಅಭಿವೃದ್ಧಿಗಾಗಿ ಹತ್ತು ಹಲವೆಂಟು ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದು, ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಆಧುನಿಕತೆಯ ಇಂದಿನ ದಿನಗಳಲ್ಲಿ ಹೈನುಗಾರಿಕೆಗೆ ಉತ್ತಮ ಅವಕಾಶಗಳಿವೆ ಸ್ವಲ್ಪ ಕಷ್ಟಪಟ್ಟರೆ ಹೆಚ್ಚಿನ ಲಾಭವನ್ನು ಪಡೆಯಬಹುದು ಎಂದರು.

ಡಾ.ಸಿದ್ಧಲಿಂಗಯ್ಯಸ್ವಾಮಿ ಹಿರೇಮಠ ಅವರು ಆಕಳು ಮತ್ತು ಎಮ್ಮೆ ತಳಿಯ ಮಹತ್ವ, ಡಾ.ಮೋಹನ ಪಿ 'ಪಶು ಕೃತಕ ಗರ್ಭಧಾರಣೆ', ಡಾ.ಶಿವಾನಂದ ಗೌಡರ 'ಮೇವು ಉತ್ಪಾದನೆ ಮತ್ತು ನಿರ್ವಹಣೆ', ಡಾ.ಅರುಣ ಸೋಮಗಂಧ 'ಆಕಳು ಮತ್ತು ಎಮ್ಮೆಗಳ ರೋಗಗಳು ಹಾಗೂ ಹತೋಟಿ', ಡಾ.ಜಗನ್ನಾಥರಾವ್ 'ಹಾಲು ಮತ್ತು ಹಾಲು ಉತ್ಪನ್ನಗಳು' ವಿಷಯವಾಗಿ ಪರಿಣಾಮಕಾರಿ ಉಪನ್ಯಾಸ ನೀಡಿದರು.

ಸಮಾರಂಭದಲ್ಲಿ ಔಟ್‌ರಿಚ್ ಸಂಸ್ಥೆಯ ಹಿರಿಯ ಕಾರ್ಯಕ್ರಮ ಸಂಯೋಜಕ ಗೋವಿಂದಯ್ಯ ಬಿ, ಕಾರ್ಯಕ್ರಮ ಸಂಯೋಜಕ ಲೋಹಿತ್ ಕಾಸರ ಮತ್ತು ರಿಲಾಯನ್ಸ್ ಫೌಂಡೇಶನ್‌ನ ಜೀರೋಂಪಿಯೋ ಉಪಸ್ಥಿತರಿದ್ದರು.

ಎರಡು ದಿನಗಳವರೆಗೆ ನಡೆದ ತರಬೇತಿ ಶಿಬಿರದಲ್ಲಿ ಔಟ್‌ರಿಚ್ ಸಂಸ್ಥೆಯ ವಿಸ್ತರಣಾ ಮಹಿಳಾ ಕಾರ್ಯಕರ್ತರು ಸಕ್ರೀಯವಾಗಿ ಪಾಲ್ಗೊಂಡು ಹಲವಾರು ವಿಷಯಗಳನ್ನು ತಿಳಿದುಕೊಂಡರು ಹಾಗೂ ತಜ್ಞರೊಂದಿಗೆ ಸಂವಾದ ನಡೆಸಿ ತಮ್ಮ ಜ್ಞಾನವನ್ನು ಹೆಚ್ಚಿಸಿಕೊಂಡರು.




## ಅನ್ವೇಷಣಾ ಕಾರ್ಯಕ್ರಮದ ಯಶಸ್ವಿಗೆ ಶ್ರಮಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಶುಕ್ರವಾರ ಗದಗ ನಗರದ ತೆರಂಗಾ ಪಾರ್ಕ್‌ನಲ್ಲಿ ಸಭೆ ನಡೆಸಿದರು.

ಲಕ್ಕುಂಡಿ ಗ್ರಾಮದಲ್ಲಿನ ಶಾಸನಗಳು, ಪ್ರಾಚ್ಯಾವಶೇಷಗಳ ಅನ್ವೇಷಣಾ ಕಾರ್ಯಕ್ರಮದ ಪೂರ್ವ ಸಿದ್ಧತೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಕಾರ್ಯಕ್ರಮ ಯಶಸ್ವಿಗೆ ಕೈಗೊಂಡಿರುವ ಯೋಜನೆಗಳ ಕುರಿತು ಮಾಹಿತಿ ಪಡೆದ ಸಚಿವರು, ಕಾರ್ಯಕ್ರಮ ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸೂಚಿಸಿದರು. ಅನ್ವೇಷಣೆ ಕಾರ್ಯದಲ್ಲಿ ದೊರೆತ ಶಾಸನ, ಮೂರ್ತಿಗಳಿಗೆ ಯಾವುದೇ ತರಹದ ಹಾನಿಯಾಗದಂತೆ ಸುರಕ್ಷಿತವಾಗಿ ಒಂದೆಡೆ ಸಂಗ್ರಹಿಸಬೇಕು. ಇದಕ್ಕೆ ಅಗತ್ಯವಿರುವ ಎಲ್ಲ ಸಾಮಗ್ರಿ ಸಲಕರಣೆಗಳನ್ನು ಸಿದ್ಧಪಡಿಸಿಕೊಂಡು ಕಾರ್ಯಾಚರಣೆ ಯಶಸ್ವಿಯಾಗಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಲಕ್ಕುಂಡಿ ಪಾರಂಪರಿಕ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸಲಹಾ ಸಮಿತಿ ಸದಸ್ಯ ಸಿದ್ದು ಪಾಟೀಲ, ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸುರೇಶ ವಿ.ನಾಡಗೌಡರ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ, ಲಕ್ಕುಂಡಿ ಪಾರಂಪರಿಕ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ಸೇರಿದಂತೆ ಇನ್ನಿತರ ಅಧಿಕಾರಿಗಳು ಹಾಜರಿದ್ದರು.

# ವಿಧಾನಸೌಧದಲ್ಲಿ ನಿಮ್ಮ ಧ್ವನಿಯಾಗಿರುವೆ

■ವಿಜಯಸಾಕ್ಷಿ ಸುದ್ದಿ, ಗದಗ

ಒಳಮೀಸಲಾತಿ ವಿರೋಧಿಸುವ ಪರಿಶಿಷ್ಟ ಜಾತಿ ಸಮುದಾಯಗಳ ಧ್ವನಿಯಾಗಿ ವಿಧಾನಸೌಧದಲ್ಲಿ ಮಾತನಾಡುವೆ ಎಂದು ಕಾನೂನು ಸಚಿವ ಎಚ್. ಕೆ. ಪಾಟೀಲ ಭರವಸೆ ನೀಡಿದರು.

ಗದಗ ನಗರದಲ್ಲಿ ಒಳಮೀಸಲಾತಿ ವಿರೋಧಿಸಿ ಪರಿಶಿಷ್ಟ ಜಾತಿಯ ಹಲವು ಸಮುದಾಯಗಳು ಶುಕ್ರವಾರ ಧರ್ಮಗುರುಗಳ ನೇತೃತ್ವದಲ್ಲಿ ಒಳಮೀಸಲಾತಿ ವಿರೋಧಿಸುವ ಪರಿಶಿಷ್ಟ ಜಾತಿ ಸಮುದಾಯಗಳ ರಾಜ್ಯ ಸಮಿತಿ ನಡೆಸಿದ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಮನವಿ ಸ್ವೀಕರಿಸಿ ಅವರು ಮಾತನಾಡಿದರು.

ಯಾವುದೇ ಕಾರಣಕ್ಕು ನಿಮಗೆ ಮೀಸಲಾತಿ ತಪ್ಪಬಾರದು. ಮೀಸಲಾತಿ ತಪ್ಪುವ ಪ್ರಶ್ನೆಯೇ ಇಲ್ಲ. ಅಂಬೇಡ್ಕರ್ ಬರೆದ ಸಂವಿಧಾನವನ್ನು ತಿದ್ದುವುದು, ತಗೆದು ಹಾಕಲು ನಮ್ಮ ದೇಶದಲ್ಲಿ ಯಾರಿಗೂ ಹಾಗೂ ಯಾವುದೇ ಸರ್ಕಾರಕ್ಕೂ ನಾವು ಬಿಡುವುದಿಲ್ಲ. ನಾನು ನಿಮ್ಮವನಾಗಿ ನಿಮ್ಮ ವಾದವನ್ನು ಕ್ಯಾಬಿನೆಟ್‌ನಲ್ಲಿ ಇಟ್ಟು, ನಿಮ್ಮೊಂದಿಗೆ ಇರುತ್ತೇನೆ. ನಿವೃತ್ತ ನ್ಯಾ. ನಾಗಮೋಹನದಾಸ ಅವರೊಂದಿಗೆ ಚರ್ಚಿಸಲು ವ್ಯವಸ್ಥೆ ಮಾಡಲಾಗುವುದು ಎಂದರು.

ರಾಜ್ಯದಲ್ಲಿ ಬಂಜಾರ, ಭೋವಿ, ಕೊರಚ, ಕೊರಮ ಹಾಗೂ ಇತರೆ ಸಮುದಾಯಗಳ 3300ಕ್ಕಿಂತ ಅಧಿಕ ತಾಂಡಾ, ಗ್ರಾಮಗಳಿವೆ. ನಮ್ಮ ಜನಸಂಖ್ಯೆ 33 ಲಕ್ಷಕ್ಕೂ ಅಧಿಕ. 2011ರ ಜನಗಣತಿ ಅಸಮರ್ಪಕವಾಗಿದೆ. ಹೊಸದಾಗಿ ಜನಗಣತಿ ನಡೆಸಿ ನಿಖರ ದತ್ತಾಂಶ ಪಡೆದು ಮೀಸಲಾತಿ ನಿರಂತರವಾಗಿರುವಂತೆ ಸರ್ಕಾರ ಕ್ರಮ ವಹಿಸಬೇಕು.

– ರವಿಕಾಂತ ಅಂಗಡಿ.
ರಾಜ್ಯಾಧ್ಯಕ್ಷರು,ಒಳಮೀಸಲಾತಿ ವಿರೋಧಿ ಪ.ಜಾತಿ ಸಮುದಾಯಗಳ ರಾಜ್ಯ ಸಮಿತಿ.




ಪಾದಯಾತ್ರೆಯ ವೇಳೆ ಧರ್ಮಗುರುಗಳಾದ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು ಲಿಂಗಸುಗೂರು, ಕುಮಾರ ಮಹಾರಾಜರು ಬಾಗಲಕೋಟ, ಸರ್ದಾರ ಸೇವಾಲಾಲ ಮಹಾರಾಜ ಚಿತ್ರದುರ್ಗ, ಮುರಾಹರಿ ಮಹಾರಾಜ ಗುಲ್ಬರ್ಗಾ ಹಾಗೂ ಶಿರಹಟ್ಟಿ ಶಾಸಕ ಚಂದ್ರು ಲಮಾಣಿ, ಸಮಾಜ ಮುಖಂಡ ರಾಘವೇಂದ್ರ ನಾಯಕ ಇವರುಗಳು ತಮ್ಮ ಸಮಾಜಕ್ಕೆ ಆಗುತ್ತಿರುವ ಅನ್ಯಾಯದ ಕುರಿತು ಹಾಗೂ ಒಳಮೀಸಲಾತಿಯ ಕುರಿತು ಹಕ್ಕೊತ್ತಾಯ ಮಾಡಿದರು. ಸಾವಿರಾರು ಸಂಖ್ಯೆಯಲ್ಲಿ ಸೇರಿದ ಹಲವು ಪ.ಜಾತಿಯ ಭಾದಿತ ಸಮುದಾಯದ ಜನರು, ರಸ್ತೆಯುದ್ದಕ್ಕೂ ಸರ್ಕಾರಕ್ಕೆ ಧಿಕ್ಕಾರ ಕೂಗುತ್ತಾ, ತಮ್ಮ ಸಮುದಾಯದ ಧ್ವಜವನ್ನು ಬಿತ್ತರಿಸುತ್ತಾ ಸಾಗಿದರು. ಕೆಲ ಸಮಯಗಳಕಾಲ ರಸ್ತೆ ಬ್ಲಾಕ್ ಮಾಡುವ ಮೂಲಕ ಪ್ರತಿಭಟನೆ ನಡೆಸಿದರು. ಈ ಪಾದಯಾತ್ರೆಯಲ್ಲಿ ಹಲವು ಸಮುದಾಯದ ಮುಖಂಡರು ಭಾಗಿಯಾಗಿ ಒಳಮೀಸಲಾತಿ ವಿರೋಧಿಸಿ ಮಾತನಾಡಿದರು. ಪ್ರತಿಭಟನೆಯಲ್ಲಿ ಧರ್ಮಗುರುಗಳಾದ ಶ್ರೀ ಶಿವಪ್ರಕಾಶ ಮಹಾರಾಜರು ಕೊಟ್ಟೂರು, ಶ್ರೀ ಮಹಾದೇವ ಮಹಾರಾಜ್ ಮಿಂಚನಾಳ, ಶ್ರೀ ಭಿಮಸಿಂಗ ಮಹಾರಾಜ್ ಇಂಟಗಿಯಾಳ, ಶ್ರೀ ತಿಪ್ಪೇಸ್ವಾಮಿ ಸುರಪುರ, ಶ್ರೀ ಶಿವಾನಂದ ಮಹಾರಾಜ್ ನಿಲಾನಗರ, ಶ್ರೀ ಗೋಸಾವಿ ಮಹಾರಾಜ ಕೊಪ್ಪಳ, ಪ್ರಮುಖರಾದ ಕೆ.ಸಿ. ನಭಾಪುರ, ನೀಲು ರಾಠೋಡ, ಪಾಂಡು ಚವ್ಹಾಣ, ಚಂದ್ರಕಾಂತ ಚವ್ಹಾಣ, ಪರಮೇಶ ನಾಯಕ, ಅನಿಲ ಕಾರಭಾರಿ, ಭರತ ನಾಯಕ, ಹನುಮಂತ ನಾಯಕ, ಆಂಜನೇಯ ಕಟಗಿ, ನಾಗರೆಡ್ಡಿ ನಿಡಗುಂದಿ, ಉದಯಕುಮಾರ, ಪ್ರಶಾಂತ ರಾಠೋಡ, ಉಮೇಶ ರಾಠೋಡ, ವಿಠ್ಠಲ ತೋಟದ, ಸುಭಾಷ ಗುಡಿಮನಿ, ಶ್ರೀನಿವಾಸ್ ಬೇವಿನಕಟ್ಟಿ, ಚಂದ್ರಾ ನಾಯಕ, ಅನಿಲ ಕಾರಭಾರಿ, ಐ.ಎಸ್. ಪೂಜಾರ, ದಯಾನಂದ ಪವಾರ್, ಪುಂಡಲೀಕ ಲಮಾಣಿ, ಶಿವಣ್ಣ ಲಮಾಣಿ, ಧನುರಾಮ ತಂಬೂರಿ, ತುಕಾರಾಮ ಲಮಾಣಿ, ಜಾನು ಲಮಾಣಿ, ಈರಣ್ಣ ಲಮಾಣಿ, ಭಿಮಸಿಂಗ ರಾಠೋಡ, ಆಂಜನೇಯ ಕಟಗಿ, ಮೋಹನ ಭಜಂತ್ರಿ, ಸೋಮು ಲಮಾಣಿ, ರಾಘವೇಂದ್ರ, ದೇವಪ್ಪ ಲಮಾಣಿ, ತಾವರೆಪ್ಪ ಲಮಾಣಿ, ಕುಬೇರಪ್ಪ ರಾಠೋಡ, ಸೋಮರೆಡ್ಡಿ, ಧನಸಿಂಗ ಲಮಾಣಿ, ಗೋಪಾಲ ಪೂಜಾರ, ಪರಶುರಾಮ ರಾಠೋಡ, ಪುರಪ್ಪ ನಾಯಕ, ನುರಪ್ಪ ನಾಯಕ, ಚಂದ್ರಾ ನಾಯಕ, ಟಿ.ಡಿ. ಪೂಜಾರ, ಸುರೇಶ್ ಮಹಾರಾಜ್, ಎಲ್.ಆರ್. ಚವ್ಹಾಣ, ಖಿಮಪ್ಪ ನಾಯಕ ಮುಂತಾದವರಿದ್ದರು.

ರಾಜ್ಯ ಸರ್ಕಾರ ಸಚಿವ ಸಂಪುಟದಲ್ಲಿ ಪ.ಜಾತಿ ನೇಮಕಾತಿ ಪ್ರಕ್ರಿಯೆಯನ್ನು ಮೂರು ತಿಂಗಳವರೆಗೆ ತಡೆ ಹಿಡಿದಿರುವುದನ್ನು ಮರು ಚಾಲನೆಗೊಳಿಸಬೇಕು. ನಮ್ಮ ಜಾತಿ ಪ್ರಮಾಣ ಹೆಚ್ಚಾಗಿದ್ದು, ನಮಗೆ ಹೆಚ್ಚಿನ ಮೀಸಲಾತಿ ಪ್ರಮಾಣ ನೀಡಬೇಕು. ಹಿಂದಿನ ಸರ್ಕಾರ ಸದಾಶಿವ ಆಯೋಗ ವರದಿಯನ್ನು ತಿರಸ್ಕರಿಸಿದೆ. ಅದರಲ್ಲಿನ ಯಾವುದೇ ಅಂಶವನ್ನು ಈಗಿನ ಸರ್ಕಾರ ಮೀಸಲಾತಿಯಲ್ಲಿ ಪರಿಗಣಿಸಬಾರದು.

–ಚಂದ್ರು ಲಮಾಣಿ.
ಶಾಸಕರು, ಶಿರಹಟ್ಟಿ ಕ್ಷೇತ್ರ.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka